ಸಂಪುಟ : 11 ಸಂಚಿಕೆ: 79 ಪುಟ : 4+2 ಬೆಲೆ: 3.00 ರವಿವಾರ ಎಪ್ರಿಲ್ 26 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 79 Pages : 4+2 Price : 3.00 Sunday April 26 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶಿರಹಟ್ಟಿ ಪೊಲೀಸ್ ಠಾಣೆಗೆ ಎಸ್‌ಪಿ ರೋಹನ್ ಜಗದೀಶ ಭೇಟಿ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ಪೊಲೀಸ್ ಠಾಣೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಠಾಣೆಯ ಕಡತಗಳು ಹಾಗೂ ಕೇಸ್ ಫೈಲ್‌ಗಳನ್ನು ಪರಿಶೀಲಿಸಿದ ಎಸ್‌ಪಿ ಅವರು, ಅಧಿಕಾರಿಗಳಿಗೆ ಕಾನೂನಿನ ಪ್ರಕಾರ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿ, ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸಬೇಕು ಎಂದು ತಿಳಿಸಿದರು.

ಠಾಣೆಯಲ್ಲಿ ನಡೆಯುತ್ತಿರುವ ಉತ್ತಮ ಕಾರ್ಯಗಳಿಗೆ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದು, ಉತ್ತಮ ಕೆಲಸ ಮಾಡುತ್ತಿರುವ ಸಿಬ್ಬಂದಿಯನ್ನು ಪ್ರಶಂಸಿಸಿದ್ದಾರೆ. ಈ ಸಂದರ್ಭದಲ್ಲಿ ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ಈರಪ್ಪ ರಿತ್ತಿ, ಎಸ್.ಟಿ. ಕಡಬಿನ ಸೇರಿದಂತೆ ಠಾಣೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ನದಿಯಲ್ಲಿ ನೀರಿನ ಮಟ್ಟ ಕುಸಿತ: ಮೂರು ಪಟ್ಟಣಗಳಿಗೆ ನೀರಿನ ಸರಬರಾಜು ಅಸ್ತವ್ಯಸ್ತ – ಸಂಕಷ್ಟದಲ್ಲಿ ಜನತೆ!

# "ಬರಿದಾದ ತುಂಗಭದ್ರಾ–ನೀರಿಗಾಗಿ ಹಾಹಾಕಾರ"!

■ ಸರ್ದಾರ್ ಯಮನೂರಪ್ಪ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ಪಟ್ಟಣ ಸೇರಿದಂತೆ ಸುತ್ತಮುತ್ತ ಪ್ರದೇಶಗಳಲ್ಲಿ ತುಂಗಭದ್ರಾ ನದಿಯಲ್ಲಿ ಉಂಟಾದ ತೀವ್ರ ನೀರಿನ ಕೊರತೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಬೇಸಿಗೆಯ ತಾಪಮಾನ ದಿನೇದಿನೇ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ನದಿಯ ನೀರಿನ ಮಟ್ಟ ಸಂಪೂರ್ಣವಾಗಿ ಕುಸಿದಿದ್ದು, ಕುಡಿಯುವ ನೀರಿನ ಸಮಸ್ಯೆ ತೀವ್ರ ರೂಪ ಪಡೆದುಕೊಂಡಿದೆ.

ಪಟ್ಟಣದ ಅನೇಕ ವಾರ್ಡ್‌ಗಳಲ್ಲಿ ನಿಯಮಿತವಾಗಿ ನೀರು ಸರಬರಾಜಾಗುತ್ತಿಲ್ಲ. ಕೆಲವಡೆ 3–4 ದಿನಗಳಿಗೊಮ್ಮೆ ಮಾತ್ರ ನೀರು ಬರುತ್ತಿದ್ದು, ಮಹಿಳೆಯರು ಹಾಗೂ ವೃದ್ಧರು ನೀರಿಗಾಗಿ ದೂರದೂರಿಗೆ ತೆರಳಿ ತರುವ



ಪರಿಸ್ಥಿತಿ ನಿರ್ಮಾಣವಾಗಿದೆ. ಖಾಸಗಿ ಟ್ಯಾಂಕರ್‌ಗಳ ಮೇಲೆ ಅವಲಂಬನೆ ಹೆಚ್ಚಾಗಿದ್ದು, ನೀರಿನ ಬೆಲೆ ಕೂಡ ಏರಿಕೆಯಾಗಿದೆ ಎಂದು ಸ್ಥಳೀಯರು ಅಳಲು ತೋಡಿಕೊಂಡಿದ್ದಾರೆ.

ಬನ್ನಿಗೋಳ ಜಾಕ್‌ವೆಲ್‌ನಲ್ಲಿ ನೀರಿನ ಮಟ್ಟ ತೀವ್ರವಾಗಿ ಇಳಿದಿರುವುದರಿಂದ ಪಂಪಿಂಗ್ ಮೋಟಾರ್‌ಗಳು ನೀರಿಲ್ಲದೆ ನಿಂತುಹೋಗಿವೆ. ಇದರಿಂದ ಕೊಟ್ಟೂರು, ಹಗರಿಬೊಮ್ಮನಹಳ್ಳಿ ಹಾಗೂ ಕೂಡ್ಲಿಗಿ ಪಟ್ಟಣಗಳಿಗೆ ನೀರು ಸರಬರಾಜು ಸಂಪೂರ್ಣವಾಗಿ ವ್ಯತ್ಯಯಗೊಂಡಿದೆ. ಒಂದೇ ಮೂಲದ ಮೇಲೆ ಅವಲಂಬಿತವಾಗಿರುವ ಈ ಮೂರು ಪಟ್ಟಣಗಳಿಗೆ ಮುಂದಿನ ದಿನಗಳಲ್ಲಿ ಇನ್ನಷ್ಟು ಗಂಭೀರ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ.

ನದಿಯಲ್ಲಿ ನೀರಿನ ಕೊರತೆಯಿಂದ ಭೂಗರ್ಭ ಜಲಮಟ್ಟವೂ ಕುಸಿದಿದ್ದು, ಬಾವಿ ಹಾಗೂ ಬೋರ್‌ವೆಲ್‌ಗಳು ಒಣಗುತ್ತಿವೆ. ಇದರಿಂದ ರೈತರು ಕೃಷಿ ಚಟುವಟಿಕೆಗಳನ್ನು ಮುಂದುವರಿಸಲು ಕಷ್ಟ ಅನುಭವಿಸುತ್ತಿದ್ದು, ಬೆಳೆಗಳು ಒಣಗುವ ಭೀತಿ ಹೆಚ್ಚಾಗಿದೆ. ಪಶುಗಳಿಗೆ ನೀರು ಒದಗಿಸುವುದೂ ದೊಡ್ಡ ಸವಾಲಾಗಿ ಪರಿಣಮಿಸಿದೆ.

ಇದೇ ವೇಳೆ ಪಟ್ಟಣದ ಕೆಲವು ಪ್ರದೇಶಗಳಲ್ಲಿ ನೀರಿನ ಸಂಗ್ರಹಣೆಗೆ ಯಾವುದೇ ಸಮರ್ಪಕ ವ್ಯವಸ್ಥೆ ಇಲ್ಲದ ಕಾರಣ, ಮಳೆ ನೀರನ್ನು ಸಂರಕ್ಷಿಸುವ ಕ್ರಮಗಳ ಕೊರತೆ ಸ್ಪಷ್ಟವಾಗಿ ಗೋಚರಿಸುತ್ತಿದೆ. ಸ್ಥಳೀಯರು ತಾತ್ಕಾಲಿಕ ಕ್ರಮಗಳ ಜೊತೆಗೆ ಶಾಶ್ವತ ನೀರಾವರಿ ಯೋಜನೆಗಳನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿದ್ದಾರೆ.

ಸ್ಥಳೀಯರು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಸಮಸ್ಯೆ ಶೀಘ್ರ ಪರಿಹಾರವಾಗದಿದ್ದರೆ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.

### ಸ್ಥಳೀಯರ ಪ್ರಮುಖ ಬೇಡಿಕೆಗಳು

* ಸಿಂಗಟಲೂರು ಬ್ಯಾರೇಜ್‌ನಿಂದ ತುಂಗಭದ್ರಾ ನದಿಗೆ ತಕ್ಷಣ ನೀರು ಬಿಡುಗಡೆ ಮಾಡಬೇಕು
* ಬನ್ನಿಗೋಳ ಜಾಕ್‌ವೆಲ್ ಬಳಿ ಸ್ಯಾಂಡ್ ಬ್ಯಾಗ್‌ಗಳ ಮೂಲಕ ನೀರನ್ನು ತಡೆದು ಪಂಪಿಂಗ್‌ಗೆ ಅನುಕೂಲ ಮಾಡಬೇಕು
* ಹಗರಿಬೊಮ್ಮನಹಳ್ಳಿ ಪಟ್ಟಣಕ್ಕೆ ತುರ್ತು ಕುಡಿಯುವ ನೀರಿನ ಟ್ಯಾಂಕರ್ ವ್ಯವಸ್ಥೆ ಕಲ್ಪಿಸಬೇಕು
* ಪರ್ಯಾಯವಾಗಿ ಹೊಸ ಬೋರ್‌ವೆಲ್‌ಗಳನ್ನು ತುರ್ತಾಗಿ ತೋಡಬೇಕು ಹಾಗೂ ಹಳೆಯ ಬೋರ್‌ಗಳನ್ನು ಪುನಶ್ಚೇತನಗೊಳಿಸಬೇಕು
* ದೀರ್ಘಕಾಲೀನ ಪರಿಹಾರಕ್ಕಾಗಿ ಶಾಶ್ವತ ನೀರಾವರಿ ಹಾಗೂ ಕುಡಿಯುವ ನೀರಿನ ಯೋಜನೆ ರೂಪಿಸಬೇಕು.

### 4.85 ಕೋಟಿ ವೆಚ್ಚದ ಯೋಜನೆಗಳಿಗೆ ಭಾನುವಾರ ಶಿಲಾನ್ಯಾಸ – ಶಾಸಕ ಜಿ.ಎಸ್. ಪಾಟೀಲ

# ರೋಣದಲ್ಲಿ ಇಂದು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

**■ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ಪಟ್ಟಣ ಸೇರಿದಂತೆ ಕ್ಷೇತ್ರದಲ್ಲಿ ಈಗಾಗಲೇ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದ್ದು, ಇದೀಗ ಪಟ್ಟಣದಲ್ಲಿ 4 ಕೋಟಿ 85 ಲಕ್ಷ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಎಪ್ರಿಲ್ 26ರಂದು ಚಾಲನೆ ನೀಡಲಾಗುತ್ತಿದೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್. ಪಾಟೀಲ ತಿಳಿಸಿದ್ದಾರೆ.

ಶನಿವಾರ ತಮ್ಮ ನಿವಾಸದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪಟ್ಟಣದ ಎಂಆರ್‌ಬಿಸಿ ಕಾಲುವೆ ಮತ್ತು ಸೂಡಿ ರಸ್ತೆಯಲ್ಲಿ ದ್ವಿಪಥ ಸಿಸಿ ರಸ್ತೆ ನಿರ್ಮಾಣ ಕಾರ್ಯ ಭರದಿಂದ ಸಾಗುತ್ತಿದೆ. ಫುಟ್‌ಪಾತ್ ಕಾಮಗಾರಿಯೂ ನಡೆಯುತ್ತಿದ್ದು, ರಸ್ತೆ ಕಾಮಗಾರಿ



ಪೂರ್ಣಗೊಂಡ ಬಳಿಕ ಆಕರ್ಷಕ ವಿದ್ಯುತ್ ದೀಪಗಳನ್ನು ಅಳವಡಿಸಲಾಗುವುದು ಎಂದರು.

ಕಾರ್ಮಿಕರ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 38 ಕೋಟಿ ವೆಚ್ಚದಲ್ಲಿ ವಸತಿ ಶಾಲೆ ನಿರ್ಮಾಣವಾಗುತ್ತಿದ್ದು, 50 ಕೋಟಿ ವೆಚ್ಚದ ಜೆಟಿಟಿಸಿ ಕಾಲೇಜು ಕಟ್ಟಡದ ಮೊದಲ ಹಂತ ಪೂರ್ಣಗೊಳ್ಳುವ ಹಂತದಲ್ಲಿದೆ. ಬರುವ ಶೈಕ್ಷಣಿಕ ವರ್ಷದಿಂದ ಕಾಲೇಜು ಆರಂಭಿಸಲಾಗುವುದು ಎಂದು ಹೇಳಿದರು.

ಪಟ್ಟಣದ 10ನೇ ಮತ್ತು 11ನೇ ಶತಮಾನದ ಪ್ರಾಚೀನ ದೇವಸ್ಥಾನಗಳ ಮರುನಿರ್ಮಾಣಕ್ಕೆ 4.50 ಕೋಟಿ ಅನುದಾನ ಒದಗಿಸಲಾಗಿದ್ದು ಕಾಮಗಾರಿಗಳು ಪ್ರಗತಿಯಲ್ಲಿವೆ. ವಾಲ್ಮೀಕಿ ಸಮುದಾಯ ಭವನ, ಡಾ. ಬಿ.ಆರ್. ಅಂಬೇಡ್ಕರ್ ಭವನ ಮತ್ತು ಡಾ. ಬಾಬು ಜಗಜೀವನ್ ರಾಮ್ ಸಮುದಾಯ ಭವನಗಳ ನಿರ್ಮಾಣಕ್ಕೂ 4 ಕೋಟಿ ಅನುದಾನ ನೀಡಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

> "ಪಟ್ಟಣದಲ್ಲಿ ಪ್ರವಾಸಿ ತಾಣದ ಕೊರತೆಯನ್ನು ನೀಗಿಸಲು ಜಿಗಳೂರ ಕೆರೆಯ ತಟದಲ್ಲಿ ಸಾಲುಮರದ ತಿಮ್ಮಕ್ಕ ಉದ್ಯಾನವನ್ನು ಲೋಕಾರ್ಪಣೆ ಮಾಡಲಾಗಿದೆ.
> ಅದರ ಅಭಿವೃದ್ಧಿಗೆ 1 ಕೋಟಿ ಅನುದಾನ ಮಂಜೂರಾಗಿದೆ. ರೈತರ ಹಿತಕ್ಕಾಗಿ 6 ಕೋಟಿ ವೆಚ್ಚದಲ್ಲಿ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೂ ಶೀಘ್ರ ಭೂಮಿಪೂಜೆ ನಡೆಯಲಿದೆ."
>
> **– ಜಿ.ಎಸ್. ಪಾಟೀಲ, ಶಾಸಕ.**

ಪಟ್ಟಣದ ಸಮಗ್ರ ಅಭಿವೃದ್ಧಿಗೆ ಸಾರ್ವಜನಿಕರ ಸಹಕಾರ ಅಗತ್ಯವಿದೆ ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಬಸವರಾಜ ನವಲಗುಂದ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಬಾವಾಸಾಬ ಬೆಟಗೇರಿ, ಸಂಗು ನವಲಗುಂದ, ಅಪ್ಪು ಗಿರಡ್ಡಿ, ಆನಂದ ಚಂಗಳಿ, ಮಲೀಕ್ ಯಲಿಗಾರ, ಸಂಜಯ ದೊಡ್ಡಮನಿ, ಸೋಮು ನಾಗರಾಜ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಗಾಯಕ ವೆಂಕಟೇಶ ಕುಲಕರ್ಣಿಗೆ ಪಿಎಚ್‌ಡಿ ಗೌರವ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಗಾಯಕ ವೆಂಕಟೇಶ ಕುಲಕರ್ಣಿ ಅವರಿಗೆ ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ 75ನೇ ವಾರ್ಷಿಕ ಘಟಿಕೋತ್ಸವದಲ್ಲಿ ಸಂಗೀತ ವಿಷಯದಲ್ಲಿ ಪಿಎಚ್‌ಡಿ ಪದವಿ ಪ್ರಧಾನ ಮಾಡಲಾಯಿತು.

ಘಟಿಕೋತ್ಸವ ಸಮಾರಂಭದಲ್ಲಿ ರಾಜ್ಯಪಾಲ ಥಾವರಚಂದ್ ಗೆಹಲೋಟ್, ಉನ್ನತ ಶಿಕ್ಷಣ ಸಚಿವ ಡಾ. ಎಂ. ಸಿ. ಸುಧಾಕರ್, ಕುಲಪತಿ ಡಾ. ಎ. ಎಂ. ಖಾನ್, ಕುಲಸಚಿವ ಡಾ. ಶಂಕರ ವಣಿಕ್ಯಾಳ ಹಾಗೂ ಮೌಲ್ಯಮಾಪನ ಕುಲಸಚಿವ ನಿಜಲಿಂಗಪ್ಪ ಮಟ್ಟಿಹಾಳ ಉಪಸ್ಥಿತರಿದ್ದರು.

ಸಂಗೀತ ಕ್ಷೇತ್ರದಲ್ಲಿ ಮಾಡಿದ ಸಾಧನೆಯನ್ನು ಗುರುತಿಸಿ ಈ ಗೌರವ ಪ್ರದಾನ ಮಾಡಲಾಗಿದೆ ಎಂದು ತಿಳಿದುಬಂದಿದೆ.

### ಶರಣರ ಚಿಂತನೆಗಳಿಂದ ಉತ್ತಮ ವ್ಯಕ್ತಿತ್ವ ನಿರ್ಮಾಣ

## ಬಾಲ್ಯದಲ್ಲೇ ಬಸವಾದಿ ಶರಣರ ವಿಚಾರ ಅಳವಡಿಸಿಕೊಳ್ಳಲು ಕರೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಬಸವಾದಿ ಶರಣರ ವಿಚಾರಗಳನ್ನು ಬಾಲ್ಯದಲ್ಲಿಯೇ ಅರಿತು ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ವ್ಯಕ್ತಿತ್ವ ರೂಪುಗೊಳ್ಳುತ್ತದೆ ಎಂದು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ತಿಳಿಸಿದರು.

ನಗರದ ತೋಂಟದಾರ್ಯ ಮಠದಲ್ಲಿ ವಚನ ಪಾಠಶಾಲೆಯ ವತಿಯಿಂದ ಆಯೋಜಿಸಲಾದ ಪ್ರಶಸ್ತಿ ವಿತರಣಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ವಚನಗಳಲ್ಲಿರುವ ಸಂದೇಶಗಳು ಸಾರ್ವಕಾಲಿಕ ಸತ್ಯಗಳಾಗಿದ್ದು, ವ್ಯಕ್ತಿಯ ಒಳಿತಿನ ಜೊತೆಗೆ ಸಮಾಜದ ಪ್ರಗತಿಗೂ ದಾರಿ ತೋರಿಸುತ್ತವೆ ಎಂದರು. ವರ್ಷಪೂರ್ತಿ ವಚನ ಕಂಠಪಾಠ, ವಚನ ನೃತ್ಯ, ಶರಣ ಸಂಸ್ಕೃತಿ ಶಿಬಿರ, ರಸಪ್ರಶ್ನೆ, ವಿಚಾರ ಸಂಕಿರಣ ಹಾಗೂ ನಾಟಕೋತ್ಸವಗಳನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮಾಜಿ ಸಚಿವ ಎಸ್.ಎಸ್. ಪಾಟೀಲ ಮಾತನಾಡಿ, ಇಂದಿನ ಸಮಾಜದಲ್ಲಿ ಶರಣರ ಚಿಂತನೆಗಳು ಅತ್ಯಂತ ಅಗತ್ಯವಾಗಿವೆ. ಶಾಲೆಗಳಲ್ಲಿ ಸೀಮಿತವಾಗಿರುವ ಮೌಲ್ಯಾಧಾರಿತ ಶಿಕ್ಷಣವನ್ನು ವಿಸ್ತರಿಸುವಲ್ಲಿ ವಚನ ಪಾಠಶಾಲೆಗಳು ಪ್ರಮುಖ ಪಾತ್ರವಹಿಸಬೇಕು ಎಂದು ಹೇಳಿದರು. ತೋಂಟದಾರ್ಯಮಠದ ಈ ಪ್ರಯತ್ನ ಇತರ ಮಠಗಳಿಗೆ ಪ್ರೇರಣೆಯಾಗಲಿ ಎಂದರು.

ವಿವೇಕಾನಂದಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಳಿಕ ವಿವಿಧ ಸ್ಪರ್ಧೆಗಳು ನಡೆಯಿತು.

**ಸ್ಪರ್ಧಾ ವಿಜೇತರು:** ವಚನ ಕಂಠಪಾಠ (1–4ನೇ ತರಗತಿ): ಪ್ರಣಮ್ಯ ಗುಜಮಾಗಡಿ (ಪ್ರಥಮ), ಅಪೂರ್ವ ವಡ್ಡರ (ದ್ವಿತೀಯ), ನಿಶ್ಚಿತಾ ಪಾಟೀಲ (ತೃತೀಯ).

**ವಚನ ಕಂಠಪಾಠ (5–8ನೇ ತರಗತಿ):** ತನುಶ್ರೀ ಬದಿ (ಪ್ರಥಮ), ಕೃಷ್ಣಪ್ರಿಯ ಬದಿ (ದ್ವಿತೀಯ), ಸಂಜನಾ ಗಾಜಿ (ತೃತೀಯ).

**ಪ್ರಬಂಧ ಸ್ಪರ್ಧೆ (ಪ್ರೌಢಶಾಲೆ):** ಶ್ರಾವಣಿ ಗುಡಗೂರ (ಪ್ರಥಮ), ಸುಮಾ ನಾಯ್ಕಲ್ (ದ್ವಿತೀಯ), ಪೂಜಾ ಆಲೂರ ▶▶3ನೇ ಪುಟಕ್ಕೆ

## ಶ್ರೀ ಸೋಮೇಶ್ವರ ಜಾತ್ರಾ ಮಹೋತ್ಸವ ಆರಂಭ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವವು ಎಪ್ರಿಲ್ 25ರಿಂದ 28ರವರೆಗೆ ನಾಲ್ಕು ದಿನಗಳ ಕಾಲ ಭಕ್ತಿಭಾವದಿಂದ ನಡೆಯಲಿದೆ ಎಂದು ಜಾತ್ರಾ ಸಮಿತಿ ಅಧ್ಯಕ್ಷ ಕುಬೇರಪ್ಪ ಮಹಾಂತಶೆಟ್ಟರ ತಿಳಿಸಿದ್ದಾರೆ.

ದೇವಸ್ಥಾನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರೆಯ ಅಂಗವಾಗಿ ಎ.25 ಶನಿವಾರ ಸಂಜೆ 6.30ಕ್ಕೆ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಶ್ರೀ ಲಕ್ಷ್ಮೀ ದೇವರ ಪೂಜೆ ಹಾಗೂ ರಥ ಪೂಜೆ ನಡೆಯಲಿದೆ ಎಂದು ಹೇಳಿದರು.

ಎ.26 ಭಾನುವಾರ ವೈಶಾಖ ಶುದ್ಧ ದಶಮಿಯ ಶುಭದಿನದಂದು ಸಂಜೆ 5.30ಕ್ಕೆ ಸಕಲ ವಾದ್ಯ ವೈಭವದೊಂದಿಗೆ ಮಹಾರಥೋತ್ಸವ ಜರುಗಲಿದೆ. ಎ.27 ಸೋಮವಾರ ಸಂಜೆ 5.30ಕ್ಕೆ ಕಡುಬಿನ ಕಾಳಗ ಮತ್ತು ಎ.28 ಮಂಗಳವಾರ ಬೆಳಿಗ್ಗೆ 8ಕ್ಕೆ ದೇವರ ಓಕಳಿ ಕಾರ್ಯಕ್ರಮ ನಡೆಯಲಿದೆ.

ಸೋಮೇಶ್ವರ ಭಕ್ತರ ಟ್ರಸ್ಟ್ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ ಹಾಗೂ ಅರ್ಚಕರ ಸಂಘದ ಅಧ್ಯಕ್ಷ ದಿಗಂಬರ ಪೂಜಾರ ಮಾತನಾಡಿ, ವಿವಿಧ ಭಾಗಗಳಿಂದ ಆಗಮಿಸುವ ಭಕ್ತರಿಗೆ ಕುಡಿಯುವ ನೀರು, ಪ್ರಸಾದ, ಪಾರ್ಕಿಂಗ್ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ಎಂದು ತಿಳಿಸಿದರು. ಜಾತ್ರಾ ಸಮಿತಿ, ಅರ್ಚಕರ ಸಮಿತಿ, ಟ್ರಸ್ಟ್ ಹಾಗೂ ಭಕ್ತರ ಸಹಕಾರದಿಂದ ಈ ಜಾತ್ರೆಯನ್ನು ವಿಜೃಂಭಣೆಯಿಂದ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಬಸವೇಶ ಮಹಾಂತಶೆಟ್ಟರ, ಚಂಬಣ್ಣ ಬಾಳಿಕಾಯಿ, ಸುರೇಶ ರಾಚನಾಯ್ಕರ, ಸಿದ್ದನಗೌಡ ಬಳ್ಳೊಳ್ಳಿ, ಶಿವಯೋಗಿ ಅಂಕಲಕೋಟಿ, ಪ್ರಕಾಶ ಮುಳಗುಂದ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಅನಧಿಕೃತ ಅಂಗಡಿಗಳ ತೆರವುಗೆ ಆಗ್ರಹಿಸಿ ನಡೆದ ಹೋರಾಟ 3ನೇ ದಿನಕ್ಕೆ

## ಜಾತ್ರೆಯ ನೆಪದಲ್ಲಿ ಸಾರ್ವಜನಿಕ ರಸ್ತೆ ದುರುಪಯೋಗ!



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದಲ್ಲಿ ಜಾತ್ರೆಯ ನೆಪದಲ್ಲಿ ಸಾರ್ವಜನಿಕ ರಸ್ತೆಯನ್ನು ದುರುಪಯೋಗಪಡಿಸಿಕೊಂಡು ತಿಂಗಳಾನುಗಟ್ಟಲೆ ಸಾರ್ವಜನಿಕರಿಗೆ ತೊಂದರೆ ಉಂಟುಮಾಡಲಾಗುತ್ತಿದೆ ಹಾಗೂ ಸ್ಥಳೀಯ ವ್ಯಾಪಾರಸ್ಥರ ಜೀವನೋಪಾಯಕ್ಕೆ ಧಕ್ಕೆಯಾಗಿದೆ ಎಂದು ಆರೋಪಿಸಿ ನಗರಸಭೆ ಮತ್ತು ತೋಂಟದಾರ್ಯ ಜಾತ್ರಾ ಮಂಡಳಿಯ ವಿರುದ್ಧ ನಡೆಯುತ್ತಿರುವ ಅನಿರ್ದಿಷ್ಟಾವಧಿ ಪ್ರತಿಭಟನೆ 3ನೇ ದಿನಕ್ಕೆ ಕಾಲಿಟ್ಟಿದೆ.

ಸಾರ್ವಜನಿಕ ರಸ್ತೆಯಲ್ಲಿ ಸ್ಥಾಪಿಸಲಾದ ಅನಧಿಕೃತ ಅಂಗಡಿಗಳನ್ನು ಕೂಡಲೇ ತೆರವುಗೊಳಿಸಿ, ತಾತ್ಕಾಲಿಕ ವ್ಯಾಪಾರಸ್ಥರನ್ನು ಸ್ಥಳಾಂತರಿಸಬೇಕು ಎಂದು ಆಗ್ರಹಿಸಿ ಗದಗ ನಗರದ ಗಾಂಧೀ ವೃತ್ತದಲ್ಲಿ ವಿವಿಧ ದಲಿತ ಹಾಗೂ ಹಿಂದೂ ಪರ ಸಂಘಟನೆಗಳು ಮತ್ತು ಸ್ಥಳೀಯ ವ್ಯಾಪಾರಸ್ಥರು ಸೇರಿ ಪ್ರತಿಭಟನೆ ನಡೆಸುತ್ತಿದ್ದಾರೆ. ಈ ಪ್ರತಿಭಟನೆಯಲ್ಲಿ ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ಜಿಲ್ಲಾ ಸಂಚಾಲಕ ಸತೀಶ ಕುಂಬಾರ, ದಲಿತ ಮಿತ್ರ ಮೇಳದ ಅಧ್ಯಕ್ಷ ಕುಮಾರ ನಡಗೇರಿ, ಪರಶುರಾಮ ಆಡೀನ, ಸದಾನಂದ ಸಿಂಗ್ ಗುರ್ಲಹೊಸೂರ, ಪಿ.ಎಫ್. ಕಾಳೆ (ಗೌರವ ಅಧ್ಯಕ್ಷರು), ಆನಂದ ಅರಕೇರಿ, ಭರತ್ ಲದ್ದಿ, ಶಿವು ಲದ್ದಿ, ಮಾಂತೇಶ ಹೊನ್ನಪ್ಪನವರ, ಸಂತೋಷ ಕರಿ, ಸೋಮಪ್ಪ ಲಮಾಣಿ, ಆಟೋ ಸೇನಾ ಈರಪ್ಪ ವಾಲ್ಮೀಕಿ, ಶಿವಯ್ಯ ಸಾಲಿಮಠ, ಈರಣಾ ಗಾಣಿಗೇರ, ರಾಜು ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು. ಪ್ರತಿಭಟನೆ ಮುಂದುವರಿಯಲಿದ್ದು, ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದ್ದಾರೆ.

# ಬಿಜೆಪಿ ಕೈಗೊಂಬೆಯಾಗಿರುವ ಸಿಬಿಐ-ಇಡಿ-ಐಟಿ!

## ವಿರೋಧ ಪಕ್ಷಗಳ ಮೇಲೆ ರಾಜಕೀಯ ಪ್ರೇರಿತ ದಾಳಿ; ಅಂಕಿ-ಅಂಶಗಳೊಂದಿಗೆ ಅಶೋಕ ಮಂದಾಲಿ ಆರೋಪ



"ಇಡಿ, ಐಟಿ, ಸಿಬಿಐ ಸಂಸ್ಥೆಗಳು ಸ್ವತಂತ್ರ ಸಂಸ್ಥೆಗಳಾಗಿರಬೇಕು. ಆದರೆ ಅವುಗಳನ್ನು ಬಿಜೆಪಿ ತನ್ನ ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿರುವುದು ಪ್ರಜಾಪ್ರಭುತ್ವಕ್ಕೆ ಅಪಾಯಕಾರಿಯಾಗಿದೆ."

– **ಅಶೋಕ ಮಂದಾಲಿ,** ಪ್ರಚಾರ ಸಮಿತಿ ಗದಗ ಜಿಲ್ಲಾಧ್ಯಕ್ಷರು.

### ಚುನಾವಣಾ ಸಂದರ್ಭಗಳಲ್ಲಿ ದಾಳಿಗಳ ಆರೋಪ

ತಮಿಳುನಾಡು, ಪಶ್ಚಿಮ ಬಂಗಾಳ, ಮಹಾರಾಷ್ಟ್ರ ಸೇರಿದಂತೆ ಹಲವು ರಾಜ್ಯಗಳಲ್ಲಿ ಚುನಾವಣೆಗೆ ಮುನ್ನ ವಿರೋಧ ಪಕ್ಷಗಳ ನಾಯಕರ ಮನೆಗಳ ಮೇಲೆ ಐಟಿ, ಇಡಿ, ಸಿಬಿಐ ದಾಳಿಗಳು ನಡೆದಿರುವುದನ್ನು ಅವರು ಉದಾಹರಿಸಿದರು. ಡಿಎಂಕೆ ನಾಯಕ ಎಂಕೆ ಸ್ಟಾಲಿನ್ ಕುಟುಂಬ, ಟಿಎಂಸಿ ನಾಯಕರು, ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್ ಸೇರಿದಂತೆ ಹಲವರ ವಿರುದ್ಧದ ಪ್ರಕರಣಗಳನ್ನು ಅವರು ಉಲ್ಲೇಖಿಸಿದರು.

### ಕರ್ನಾಟಕದಲ್ಲಿ ನಡೆದ ಪ್ರಮುಖ ದಾಳಿಗಳು

2018ರ ವಿಧಾನಸಭೆ ಚುನಾವಣೆಯ ಸಂದರ್ಭದಲ್ಲಿ ಹಲವು ಕಾಂಗ್ರೆಸ್ ನಾಯಕರ ಮೇಲೆ ಐಟಿ ದಾಳಿಗಳು ನಡೆದಿರುವುದನ್ನು ಅವರು ವಿವರಿಸಿದರು. ಎಂಟಿಬಿ ನಾಗರಾಜ್, ಬಿ. ಶಿವಣ್ಣ, ಡಿ.ಕೆ. ಶಿವಕುಮಾರ್ ಸೇರಿದಂತೆ ಅನೇಕ ನಾಯಕರ ಹೆಸರುಗಳನ್ನು ಉಲ್ಲೇಖಿಸಿದರು.

### 2023–24ರಲ್ಲಿ ದೇಶಾದ್ಯಂತ ನಡೆದ ದಾಳಿಗಳು

ಪಂಜಾಬ್, ಕೇರಳ, ದೆಹಲಿ, ತೆಲಂಗಾಣ, ಜಾರ್ಖಂಡ್ ಸೇರಿದಂತೆ ಹಲವು ರಾಜ್ಯಗಳಲ್ಲಿ ವಿರೋಧ ಪಕ್ಷಗಳ ನಾಯಕರ ಮೇಲೆ ಇಡಿ, ಸಿಬಿಐ, ಐಟಿ ದಾಳಿಗಳು ನಡೆದಿವೆ ಎಂದು ಅವರು ಆರೋಪಿಸಿದರು. ಮನೀಶ್ ಸಿಸೋಡಿಯಾ, ಸತ್ಯೇಂದ್ರ ಜೈನ್, ಸಂಜಯ್ ಸಿಂಗ್ ಸೇರಿದಂತೆ ಹಲವರ ಪ್ರಕರಣಗಳನ್ನು ಅವರು ಉಲ್ಲೇಖಿಸಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ಕೈಗೊಂಬೆಯಾಗಿರುವ ಸಿಬಿಐ, ಇಡಿ ಹಾಗೂ ಐಟಿ ಸಂಸ್ಥೆಗಳು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಕೊಳ್ಳಿ ಇಟ್ಟಂತಾಗಿದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರು ಹಾಗೂ ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಇತ್ತೀಚೆಗೆ ಬಿಟ್‌ಕಾಯಿನ್ ಅಕ್ರಮ ವಹಿವಾಟು ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ಎನ್.ಎ. ಹ್ಯಾರಿಸ್ ಅವರ ಪುತ್ರರ ಮನೆಗಳ ಮೇಲೆ ನಡೆದ ಇಡಿ ದಾಳಿ ಬಿಜೆಪಿಯ ಹತಾಶೆಯ ನಡೆ ಎಂದು ಟೀಕಿಸಿದರು. ಇದೇ ರೀತಿಯಲ್ಲಿ 2025ರ ಜೂನ್ 11ರಂದು ಬಳ್ಳಾರಿ-ವಿಜಯನಗರ ಜಿಲ್ಲೆಗಳಲ್ಲಿ ಕಾಂಗ್ರೆಸ್ ನಾಯಕರ ಮನೆಗಳ ಮೇಲೆ ದಾಳಿ ನಡೆದಿರುವುದನ್ನೂ ಅವರು ಉಲ್ಲೇಖಿಸಿದ್ದಾರೆ.

ಬಿಜೆಪಿ ವಿರೋಧ ಪಕ್ಷಗಳನ್ನು ಕುಗ್ಗಿಸಲು ಇಡಿ, ಐಟಿ, ಸಿಬಿಐ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ. ಕಳೆದ 10 ವರ್ಷಗಳಲ್ಲಿ ನಡೆದ 5,297 ಇಡಿ ದಾಳಿಗಳಲ್ಲಿ ಶೇ.95ರಷ್ಟು ಬಿಜೆಪಿಯೇತರ ಪಕ್ಷಗಳ ಮೇಲೆಯೇ ನಡೆದಿದ್ದು, ಕೇವಲ 40 ಪ್ರಕರಣಗಳಲ್ಲಿ ಮಾತ್ರ ಶಿಕ್ಷೆಯಾಗಿದೆ ಎಂದು ಹೇಳಿದರು.

2014ರಿಂದ 2024ರವರೆಗೆ ದೇಶಾದ್ಯಂತ ಇಡಿ ಸುಮಾರು 25 ಪ್ರಮುಖ ನಾಯಕರ ಮೇಲೆ ದಾಳಿ ನಡೆಸಿದರೂ, ಅದರಲ್ಲಿ 23 ಮಂದಿ ಬಳಿಕ ಬಿಜೆಪಿ ಸೇರಿದ್ದಾರೆ ಮತ್ತು ಅವರ ಮೇಲಿನ ಪ್ರಕರಣಗಳು ರದ್ದಾಗಿವೆ ಎಂದು ಆರೋಪಿಸಿದರು. "ಹಾಗಾದರೆ ಬಿಜೆಪಿ ಸೇರಿದವರು 'ವಾಷಿಂಗ್ ಪೌಡರ್'ನಲ್ಲಿ ಕ್ಲೀನ್ ಆಗುತ್ತಾರಾ?" ಎಂದು ಪ್ರಶ್ನಿಸಿದ್ದಾರೆ.

ಇದೇ ವೇಳೆ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಅದಾನಿ ಕಂಪನಿಗಳ ಹಗರಣ, ಚುನಾವಣಾ ಬಾಂಡ್ ವಿಚಾರ ಸೇರಿದಂತೆ ಹಲವು ಆರೋಪಗಳನ್ನು ಮುಂದಿಟ್ಟ ಅವರು, ಇವುಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ನಾಯಕರು ಉತ್ತರಿಸಿಲ್ಲ ಎಂದು ಹೇಳಿದರು.

ಸುಪ್ರೀಂ ಕೋರ್ಟ್ ಕೂಡ ಮುಡಾ ಪ್ರಕರಣದಲ್ಲಿ ನೀಡಿದ ತೀರ್ಪಿನ ಮೂಲಕ ಬಿಜೆಪಿಯ ರಾಜಕೀಯ ಪ್ರೇರಿತ ಆರೋಪಗಳಿಗೆ ಕಪಾಳಮೋಕ್ಷ ನೀಡಿದೆ ಎಂದು ಅವರು ತಿಳಿಸಿದರು. 2015ರಿಂದ 2025ರವರೆಗೆ ಇಡಿ ದಾಖಲಿಸಿದ 193 ಪ್ರಕರಣಗಳಲ್ಲಿ ಕೇವಲ 2 ಮಾತ್ರ ಸಾಬೀತಾಗಿರುವುದು ಸಂಸ್ಥೆಗಳ ದುರುಪಯೋಗದ ಸ್ಪಷ್ಟ ಉದಾಹರಣೆ ಎಂದು ಹೇಳಿದರು.

ಚುನಾವಣಾ ಬಾಂಡ್‌ಗಳಲ್ಲಿ ಸಾವಿರಾರು ಕೋಟಿ ರೂಪಾಯಿ ಸಂಗ್ರಹವಾಗಿದ್ದು, ಅದರಲ್ಲಿ ಹೆಚ್ಚಿನ ಮೊತ್ತ ಬಿಜೆಪಿಗೆ ಸೇರಿದೆ. ಈ ಹಣ ಸ್ವಯಂಪ್ರೇರಿತವಾಗಿ ಬಂದಿದೆಯೇ ಅಥವಾ ಒತ್ತಡದ ಮೂಲಕವೇ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಒಟ್ಟಾರೆಯಾಗಿ, ಬಿಜೆಪಿ ಸರ್ಕಾರವು ಸಂಸ್ಥೆಗಳ ದುರುಪಯೋಗದ ಮೂಲಕ ರಾಜಕೀಯ ಪ್ರತಿಪಕ್ಷಗಳನ್ನು ಕುಗ್ಗಿಸಲು ಪ್ರಯತ್ನಿಸುತ್ತಿದೆ ಎಂದು ಅಶೋಕ ಮಂದಾಲಿ ಆರೋಪಿಸಿದ್ದಾರೆ.

# ನಿವೇದಿತಾಳ ಅಮೋಘ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಗದ್ಗುರು ತೋಂಟದಾರ್ಯ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿನಿ ಕುಮಾರಿ ನಿವೇದಿತಾ ರಾಚಯ್ಯ ಹೊಸಮಠ ಅವರು ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ 625ಕ್ಕೆ 568 (ಶೇ. 90.88) ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾಳೆ.

ವಿದ್ಯಾರ್ಥಿನಿಯ ಈ ಸಾಧನೆಗೆ ಮುಖ್ಯೋಪಾಧ್ಯಾಯ ಕೃಷ್ಣೆಗೌಡ ಗೌಡರ, ಶಿಕ್ಷಕ ವೃಂದ ಹಾಗೂ ಪಾಲಕರು ಅಭಿನಂದನೆ ಸಲ್ಲಿಸಿದ್ದಾರೆ.

ನಿವೇದಿತಾಳ ತಂದೆ ರಾಚಯ್ಯ ಹೊಸಮಠ ಅವರು ನಗರದ ಸ್ಟೇಷನ್ ರಸ್ತೆಯ ಹೊಸಮಠ ಪ್ಲಾಸ್ಟಿಕ್ ಅಂಗಡಿ ಮಾಲೀಕರಾಗಿದ್ದಾರೆ. ಮಗಳ ಸಾಧನೆಗೆ ತಾಯಿ ವಿದ್ಯಾಶ್ರೀ ಹೊಸಮಠ ಸೇರಿದಂತೆ ಅಜ್ಜಿ ಉಷಾ ಶಿದ್ಧಯ್ಯ ಹೊಸಮಠ, ವೀರಯ್ಯ ಹೊಸಮಠ, ಪವಿತ್ರ ಹೊಸಮಠ, ಸಂತೋಷ ಹೊಸಮಠ, ನವೀನ ಹೊಸಮಠ, ವಾತ್ಸಲ್ಯ, ಲಕ್ಷ್ಮೀ, ವಿನಾಯಕ ಸೇರಿದಂತೆ ಕುಟುಂಬದವರು ಸಂತಸ ವ್ಯಕ್ತಪಡಿಸಿದ್ದಾರೆ.

# ಎ.27ರಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಧಾರವಾಡ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರು ಎಪ್ರಿಲ್ 27ರಂದು ಧಾರವಾಡ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಲಸಿಕಾ ಕೇಂದ್ರವನ್ನು ಉದ್ಘಾಟಿಸಲಿದ್ದಾರೆ. ನಂತರ 10:30ಕ್ಕೆ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಸಮಗ್ರ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ ಉದ್ಘಾಟನೆ ನಡೆಯಲಿದೆ.

ಅನಂತರ 11:30ಕ್ಕೆ ಧಾರವಾಡ ತಾಲೂಕಿನ ಅಮ್ಮಿನಭಾವಿಯ ಸಮುದಾಯ ಆರೋಗ್ಯ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ ಹಾಗೂ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 2:30ಕ್ಕೆ ಕುಂದಗೋಳ ತಾಲೂಕಿನ ಇಂಗಳಗಿ ಗ್ರಾಮದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ಉದ್ಘಾಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ಕುರಿತು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಗ್ಲಿಯ ಕೆ.ಜಿ. ಮುದಗಲ್ಲ ಪ್ರೌಢಶಾಲೆಗೆ ಶೇ.100 ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿಯ ಗ್ರಾಮಾಂತರ ಶಿಕ್ಷಣ ಸಂಸ್ಥೆಯ ಕೆ.ಜಿ. ಮುದಗಲ್ಲ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಈ ವರ್ಷವೂ ಶೇ.100 ದಾಖಲಾಗಿದ್ದು, ಕಳೆದ 32 ವರ್ಷಗಳಿಂದ ನಿರಂತರವಾಗಿ ಶೇ.100 ಫಲಿತಾಂಶ ಸಾಧಿಸುವ ಮೂಲಕ ಶಾಲೆ ಹೆಮ್ಮೆಗೆ ಪಾತ್ರವಾಗಿದೆ.

ಈ ಬಾರಿ ಪರೀಕ್ಷೆಗೆ ಹಾಜರಾದ 38 ವಿದ್ಯಾರ್ಥಿಗಳು ಉತ್ತಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿನಿ ವಿದ್ಯಾಲಕ್ಷ್ಮೀ ಶಿರಹಟ್ಟಿ 97% ಅಂಕಗಳೊಂದಿಗೆ ಕನ್ನಡ ಮಾಧ್ಯಮದಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಧನಲಕ್ಷ್ಮೀ ಬಡಿಗೇರ 92%, ಸೇವಂತಿ ಟಿಕಾರೆ 90%, ಲಕ್ಷ್ಮೀ ಲಮಾಣಿ 89% ಹಾಗೂ ಅಭಿಷೇಕ ಸಾಸಲವಾಡ 85% ಅಂಕಗಳನ್ನು ಗಳಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲಾಡಳಿತ ಮಂಡಳಿ ಹಾಗೂ ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದೆ.

# ವೆಂಕಟಾಪೂರ ಶ್ರೀ ಬಸವೇಶ್ವರ ಪ್ರೌಢಶಾಲೆಗೆ ಶೇ.92 ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಗದಗ**

ಮುಂಡರಗಿ ತಾಲೂಕಿನ ವೆಂಕಟಾಪೂರದಲ್ಲಿರುವ ಜಗದ್ಗುರು ಅನ್ನದಾನೀಶ್ವರ ವಿದ್ಯಾಸಮಿತಿಯ ಅಂಗ ಸಂಸ್ಥೆಯಾದ ಶ್ರೀ ಬಸವೇಶ್ವರ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ 2026ರ ವಾರ್ಷಿಕ ಪರೀಕ್ಷೆಯಲ್ಲಿ ಶೇ.92 ಫಲಿತಾಂಶ ದಾಖಲಾಗಿದೆ.

ರಾಜೇಶ್ವರಿ ಭ. ನುಚ್ಚಂಬ್ಲಿ 546 ಅಂಕಗಳು (87.36%) ಪಡೆದು ಪ್ರಥಮ ಸ್ಥಾನ ಗಳಿಸಿದ್ದಾರೆ. ರಕ್ಷಿತಾ ಬ. ಕಿನ್ನಾಳ 539 ಅಂಕಗಳು (86.24%) ಪಡೆದು ದ್ವಿತೀಯ ಸ್ಥಾನ ಪಡೆದಿದ್ದು, ಯಶೋಧಾ ಮು. ತಳಕಲ್ಲ 537 ಅಂಕಗಳು (85.92%) ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ.

ಶಾಲೆಯ ಉತ್ತಮ ಫಲಿತಾಂಶಕ್ಕೆ ಸಂಸ್ಥೆಯ ಅಧ್ಯಕ್ಷರಾದ ಜಗದ್ಗುರು ನಾಡೋಜ ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳು, ಆಡಳಿತ ಮಂಡಳಿ, ಸ್ಥಾನಿಕ ಸಮಿತಿ ಪದಾಧಿಕಾರಿಗಳು, ಪಂಚಾಯತಿ ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ ಹಾಗೂ ಊರಿನ ಗಣ್ಯರು ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಹೆಬ್ಬಾಳ ಶ್ರೀ ಶಿವಯೋಗೀಶ್ವರ ಪ್ರೌಢಶಾಲೆಗೆ ಶೇ.100 ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಹೆಬ್ಬಾಳ ಗ್ರಾಮದ ಶ್ರೀ ಶಿವಯೋಗೀಶ್ವರ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಈ ಬಾರಿ ಶೇ.100 ಫಲಿತಾಂಶ ಸಾಧಿಸಿ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಪರೀಕ್ಷೆಗೆ ಹಾಜರಾದ 80 ವಿದ್ಯಾರ್ಥಿಗಳಲ್ಲಿ ಎಲ್ಲ 80 ಮಂದಿ ಉತ್ತೀರ್ಣರಾಗಿದ್ದಾರೆ. ಶಾಲೆಯ ವಿದ್ಯಾರ್ಥಿ ಕಾರ್ತಿಕರಡ್ಡಿ ವೀರೇಶರಡ್ಡಿ ಕಾಮರಡ್ಡಿ 615 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ ಸ್ಥಾನ ಹಾಗೂ ತಾಲೂಕಿಗೆ ದ್ವಿತೀಯ ಸ್ಥಾನ ಗಳಿಸಿದ್ದಾರೆ.

ಸರ್ವಮಂಗಳ ಹಿರೇಮಠ 586 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ವಿಜಯಲಕ್ಷ್ಮಿ ಪಾಟೀಲ 572 ಅಂಕಗಳು ಹಾಗೂ ದಾವಲ್‌ಮಲಿಕ ಸನದಿ 567 ಅಂಕಗಳನ್ನು ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಶಿಕ್ಷಣ ಸಮಿತಿ ಪದಾಧಿಕಾರಿಗಳು ಹಾಗೂ ಶಿಕ್ಷಕ ವೃಂದ ಸಂತೋಷ ವ್ಯಕ್ತಪಡಿಸಿದ್ದಾರೆ.

# ಜಗದ್ಗುರು ಶ್ರೀ ವೀರಗಂಗಾಧರ ಶಾಲೆಗೆ ಶೇ.100 ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಜಗದ್ಗುರು ಶ್ರೀ ವೀರಗಂಗಾಧರ ಸರ್ಕಾರಿ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಈ ವರ್ಷ ಶೇ.100 ದಾಖಲಾಗಿದೆ.

ಪರೀಕ್ಷೆಗೆ ಹಾಜರಾದ 53 ವಿದ್ಯಾರ್ಥಿಗಳಲ್ಲಿ ಎಲ್ಲರೂ ಉತ್ತೀರ್ಣರಾಗಿದ್ದು, 8 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ ಹಾಗೂ 28 ಮಂದಿ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ.

ಶಾಲೆಯ ವಿದ್ಯಾರ್ಥಿನಿ ರೇಖಾ ಲಕ್ಷ್ಮಣ ಬಾಕಳೆ 97% ಅಂಕಗಳೊಂದಿಗೆ ಕನ್ನಡ ಮಾಧ್ಯಮದಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾಳೆ. ಕು. ಸೋಮಶೇಖರ ಜಂತ್ಲಿ ಹಾಗೂ ವಿನಾಯಕ ದುರ್ಗದ ಇಬ್ಬರೂ 93% ಅಂಕಗಳನ್ನು ಗಳಿಸಿದ್ದು, ಪ್ರಶಾಂತ ತಸೀಲ್ದಾರ 92% ಅಂಕಗಳನ್ನು ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಇಲಾಖೆಯ ಅಧಿಕಾರಿಗಳು ಹಾಗೂ ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದ್ದಾರೆ ಎಂದು ಮುಖ್ಯೋಪಾಧ್ಯಾಯ ಬಿ.ಸಿ. ಪಟ್ಟೇದ ತಿಳಿಸಿದ್ದಾರೆ.

# ಮೇ 7ರಂದು ಲಕ್ಷ್ಮಾಪತಿ ಹಾಲೇವಾಡಿ ಮಠದಲ್ಲಿ ರೇಣುಕಾಚಾರ್ಯ ಜಯಂತಿ ಮಹೋತ್ಸವ

## ಇಷ್ಟಲಿಂಗ ಮಹಾಪೂಜೆ, ಮೆರವಣಿಗೆ, ಧರ್ಮ ಜಾಗೃತಿ ಸಮಾವೇಶಕ್ಕೆ ಸಜ್ಜು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಐತಿಹಾಸಿಕ ಹಿನ್ನಲೆಯುಳ್ಳ ಲಕ್ಷ್ಮಾಪತಿ ಹಾಲೇವಾಡಿ ಮಠದಲ್ಲಿನ ಜಗದ್ಗುರು ರೇಣುಕಾಚಾರ್ಯ ಮಂದಿರದ ರಜತ ಮಹೋತ್ಸವ, ರೇಣುಕಾಚಾರ್ಯರ ಯುಗಮಾನೋತ್ಸವ, ಮಠದ ವಂಶಜರ ಸ್ಮರಣೆ, ಗದ್ದುಗೆಗಳ ಅನಾವರಣ ಹಾಗೂ ಧರ್ಮ ಜಾಗೃತಿ ಸಮಾವೇಶ ಮೇ 7ರಂದು ಗುರುವಾರ ನಡೆಯಲಿದೆ ಎಂದು ಶ್ರೀಮಠದ ಡಾ. ಎಸ್.ಜಿ. ಹಾಲೇವಾಡಿಮಠ ತಿಳಿಸಿದ್ದಾರೆ.

ಪಟ್ಟಣದ ಲಿಂ.ಜ. ವೀರಗಂಗಾಧರ ಕಲ್ಯಾಣ ಮಂಟಪದಲ್ಲಿ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ ಮತ್ತು ಜಿ.ಎಂ. ಮಹಾಂತಶೆಟ್ಟರ ನೇತೃತ್ವದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಈ ಮಾಹಿತಿ ನೀಡಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನಿಧ್ಯದಲ್ಲಿ ಇಷ್ಟಲಿಂಗ ಮಹಾಪೂಜೆ ನಡೆಯಲಿದೆ. ನಂತರ ಬೆಳಿಗ್ಗೆ 11 ಗಂಟೆಗೆ ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಅಂಗವಾಗಿ ರೇಣುಕ ಮಂಗಲ ಮಹಾಮೂರ್ತಿ ಹಾಗೂ ಜಗಜ್ಯೋತಿ ಬಸವಣ್ಣನವರ ಭಾವಚಿತ್ರದ ಮೆರವಣಿಗೆ ಹಾಲೇವಾಡಿ ಮಠದಿಂದ ಪಟ್ಟಣದ ಪ್ರಮುಖ ಮಾರ್ಗಗಳಲ್ಲಿ ವಾದ್ಯಮೇಳದೊಂದಿಗೆ ನಡೆಯಲಿದೆ. ಸಂಜೆ 4 ಗಂಟೆಗೆ ಶ್ರೀ ಸೋಮೇಶ್ವರ ತೇರಿನ ಮನೆ ಪ್ರಾಂಗಣದಲ್ಲಿ ಧರ್ಮ ಜಾಗೃತಿ ಸಮಾವೇಶ ನಡೆಯಲಿದ್ದು, ಮುಕ್ತಿಮಂದಿರದ ಶ್ರೀ ವಿಮಲರೇಣುಕ ವೀರಮುಕ್ತಿ ಮುನಿ ಶಿವಾಚಾರ್ಯರು ನೇತೃತ್ವ ವಹಿಸಲಿದ್ದಾರೆ. ನೊಣವಿನಕೇರಿಯ ಡಾ. ಕರಿವೃಷಭ ದೇಶಿಕೇಂದ್ರ ಶಿವಯೋಗಿ ಶಿವಾಚಾರ್ಯರು ಸಮ್ಮುಖವಹಿಸಲಿದ್ದು, ಬನ್ನಿಕೊಪ್ಪ, ಗಂಜಿಗಟ್ಟಿ, ಸಿದ್ದರಬೆಟ್ಟ, ಕರೇವಾಡಿ ಮಠ ಸೇರಿದಂತೆ ವಿವಿಧ ಮಠಾಧೀಶರು ಉಪಸ್ಥಿತರಿರುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಡಾ. ಚಂದ್ರು ಲಮಾಣಿ ವಹಿಸಲಿದ್ದು, ಉದ್ಘಾಟನೆಯನ್ನು ಸಂಸದ ಬಸವರಾಜ ಬೊಮ್ಮಾಯಿ ನೆರವೇರಿಸಲಿದ್ದಾರೆ. ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ ಹಾಗೂ ಜಿ.ಎಸ್. ಗಡ್ಡದೇವರಮಠ ಭಾವಚಿತ್ರ ಬಿಡುಗಡೆಗೊಳಿಸಲಿದ್ದಾರೆ. ಡಾ. ಸಿದ್ದಲಿಂಗೇಶ ಸಜ್ಜನಶೆಟ್ಟರ ಉಪನ್ಯಾಸ ನೀಡಲಿದ್ದಾರೆ.

"ಈ ಪುಣ್ಯ ನೆಲದಲ್ಲಿ ನಡೆಯುವ ಮಹೋತ್ಸವದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು."

**– ಜಿ.ಎಸ್. ಗಡ್ಡದೇವರಮಠ.**

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಲಕ್ಷ್ಮೇಶ್ವರದ ಸೊಪ್ಪಿನಕೇರಿ ಓಣಿಯ ಹಾಲೇವಾಡಿ ಮಠ ಮತ್ತು ಲಿಂ. ವೀರಗಂಗಾಧರ ಜಗದ್ಗುರುಗಳಿಗೆ ಅವಿನಾಭಾವ ಸಂಬಂಧವಿದೆ ಎಂದು ಹೇಳಿದರು. ಹಾಲೇವಾಡಿ ಮಠದಲ್ಲಿ ರೇಣುಕಾಚಾರ್ಯರ ಜೊತೆಗೆ ಬಸವಣ್ಣನವರ ಜಯಂತೋತ್ಸವವನ್ನು ಆಚರಿಸಲಾಗುತ್ತಿರುವುದು ಶ್ಲಾಘನೀಯ ಎಂದು ಅಭಿಪ್ರಾಯಪಟ್ಟರು.

ಪೂರ್ವಭಾವಿ ಸಭೆಯಲ್ಲಿ ಚಂಬಣ್ಣ ಬಾಳಿಕಾಯಿ, ಕುಬೇರಪ್ಪ ಮಹಾಂತಶೆಟ್ಟರ, ಆನಂದ ಮೆಕ್ಕಿ, ಬಂಗಾರೆಪ್ಪ ಮುಳಗುಂದ, ಬಸವರಾಜ ಮೆಣಸಿನಕಾಯಿ, ರುದ್ರಮುನಿ ಘಂಟಾಮಠ, ಅಶೋಕ ಬಿಸೆರೊಟ್ಟಿ, ಶಿವಯೋಗಿ ಅಂಕಲಕೋಟಿ, ಗುರುಶಾಂತಯ್ಯ ಬಾಳೇಹಳ್ಳಿಮಠ, ವೀರಭದ್ರಯ್ಯ ಹಿರೇಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸಂಶೋಧನಾ ಮನೋಭಾವ ಬೆಳೆಸಿಕೊಳ್ಳಲು ಕರೆ

## ಬೇಸಿಗೆ ಶಿಬಿರದಲ್ಲಿ ಖಗೋಳ ಅಧ್ಯಯನಕ್ಕೆ ಸ್ಪಂದನೆ



"ವಿದ್ಯಾರ್ಥಿಗಳು ಸಂಶೋಧನಾ ಮನೋಭಾವದಿಂದ ಕಲಿತು ಭವಿಷ್ಯದಲ್ಲಿ ಸಂಶೋಧಕರಾಗಬೇಕು"

**– ಡಾ. ರಾಧಿಕಾ ಕುಲಕರ್ಣಿ.**

**■ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿ ಜೀವನದಲ್ಲಿ ಕಲಿಕೆಯು ಅತ್ಯಂತ ಪ್ರಮುಖವಾಗಿದ್ದು, "ನೋಡಿ ಕಲಿ-ಮಾಡಿ ತಿಳಿ" ಎಂಬ ತತ್ವದನ್ವಯ ತಾರಾಲಯದಂತಹ ಖಗೋಳ ಅಧ್ಯಯನವನ್ನು ಬೇಸಿಗೆ ರಜೆಯಲ್ಲಿ ಆಸಕ್ತಿಯಿಂದ ಅನುಭವಿಸುವುದು ಜ್ಞಾನಾರ್ಜನೆಗೆ ಸಹಕಾರಿಯಾಗಿದೆ ಎಂದು ಗದಗ ಐಎಂಎ ನಿಕಟಪೂರ್ವ ಅಧ್ಯಕ್ಷೆ ಡಾ. ರಾಧಿಕಾ ಕುಲಕರ್ಣಿ ಹೇಳಿದರು.

ಬೆಟಗೇರಿಯ ಖಗೋಳ ತಾರಾಲಯದಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಭಾರತೀಯ ವೈದ್ಯಕೀಯ ಸಂಸ್ಥೆ (ಐಎಂಎ) ಗದಗ ಸಂಯುಕ್ತ ಆಶ್ರಯದಲ್ಲಿ ನಡೆಯುತ್ತಿರುವ "ಖಗೋಳ ವಿಸ್ಮಯ" ಬೇಸಿಗೆ ಶಿಬಿರದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸಂಶೋಧನಾ ಮನೋಭಾವ ಬೆಳೆಸಿಕೊಂಡು ಅಧ್ಯಯನಗೈದು ಭವಿಷ್ಯದಲ್ಲಿ ಸಂಶೋಧಕರಾಗಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳು ಉತ್ತಮ ಆರೋಗ್ಯವನ್ನು ರೂಢಿಸಿಕೊಳ್ಳುವುದು ಅಗತ್ಯವಾಗಿದೆ. ಓದಿನ ಜೊತೆಗೆ ಆರೋಗ್ಯ ಕಾಪಾಡಿಕೊಳ್ಳುವುದು ಬಹುಮುಖ್ಯ. ಪ್ರಸ್ತುತ ಹೆಚ್ಚಿನ ತಾಪಮಾನ ಇರುವುದರಿಂದ ಆಗಾಗ ನೀರು, ಹಣ್ಣು-ಹಂಪಲು ಸೇವನೆ, ಮಿತವಾದ ಆಹಾರ ಹಾಗೂ ಸಮರ್ಪಕ ವಿಶ್ರಾಂತಿ ಪಾಲಿಸುವುದು ಅಗತ್ಯ ಎಂದು ಅವರು ತಿಳಿಸಿದರು.

ಇನ್ನೋರ್ವ ಅತಿಥಿ ಡಾ. ಉದಯ ಕುಲಕರ್ಣಿ ಮಾತನಾಡಿ, ಆರೋಗ್ಯವೇ ಭಾಗ್ಯವಾಗಿದ್ದು ವಿದ್ಯಾರ್ಥಿ ದೆಸೆಯಲ್ಲಿಯೇ ಉತ್ತಮ ಅಭ್ಯಾಸಗಳನ್ನು ರೂಢಿಸಿಕೊಳ್ಳಬೇಕು. ಲಘು ವ್ಯಾಯಾಮ, ಕ್ರಮಬದ್ಧ ಆಹಾರ ಕ್ರಮ, ಸಮಯಕ್ಕೆ ನಿದ್ದೆ ಹಾಗೂ ಹಣ್ಣು-ಹಂಪಲು ಸೇವನೆ ಆರೋಗ್ಯ ಕಾಪಾಡಲು ನೆರವಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಡಾ. ಉದಯ ಕುಲಕರ್ಣಿ ಹಾಗೂ ಡಾ. ರಾಧಿಕಾ ಕುಲಕರ್ಣಿ ದಂಪತಿಗಳನ್ನು ಶಾಲು ಹೊದಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆಯ ಸಂಪನ್ಮೂಲ ವ್ಯಕ್ತಿಗಳಾದ ಎಂ.ಎಚ್. ಸವದತ್ತಿ, ಮಹ್ಮದ್‌ಶಫಿ ಯರಗುಡಿ, ಶ್ಯಾಮ್ ಲಾಂಡೆ, ಬಸವರಾಜ ಕಡಿವಾಲ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ವಿವಿಧ ಶಾಲೆಗಳ ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ತಾರಾಲಯ ಹಾಗೂ ಪ್ರಾಣಿ ಸಂಗ್ರಹಾಲಯಕ್ಕೆ ಭೇಟಿ ನೀಡುವ ವಿದ್ಯಾರ್ಥಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಒಂದೇ ದಿನಕ್ಕೆ ಸುಮಾರು 400 ವಿದ್ಯಾರ್ಥಿಗಳು ಆಗಮಿಸಿದ್ದರಿಂದ ತಾರಾಲಯದಲ್ಲಿ 6 ಶೋಗಳನ್ನು ಆಯೋಜಿಸಲಾಗುತ್ತಿದೆ.

# ಇಂದು 'ಜೈಹಿಂದ್ ಜಯ ಕರ್ನಾಟಕ' ವಿಶೇಷಾಂಕ ಬಿಡುಗಡೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಈ ದಿನ. ಕಾಮ್ ವತಿಯಿಂದ ಹೊರತಂದಿರುವ 'ಜೈಹಿಂದ್ ಜಯ ಕರ್ನಾಟಕ' ವಿಶೇಷಾಂಕದ ಬಿಡುಗಡೆ ಕಾರ್ಯಕ್ರಮ ಏ.26 ರಂದು ಭಾನುವಾರ ಬೆಳಿಗ್ಗೆ 10:30ಕ್ಕೆ ನಗರದ ಬಸವೇಶ್ವರ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಸಭಾಂಗಣದಲ್ಲಿ ನಡೆಯಲಿದೆ.




ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಪ್ರಾಚಾರ್ಯ ಕೆ.ಎಚ್. ಬೇಲೂರು ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಹಿರಿಯ ಸಾಹಿತಿ ಪ್ರೊ. ಬಿ.ಎ. ಕೆಂಚರೆಡ್ಡಿ ಭಾಗವಹಿಸಲಿದ್ದಾರೆ.

ವಿಶೇಷಾಂಕದ ಕುರಿತು ಸಹಾಯಕ ಪ್ರಾಧ್ಯಾಪಕ ಡಾ. ಅನುಷಾ ಎಚ್.ಸಿ ಹಾಗೂ ಪ್ರೊ. ಬಸವರಾಜ ಪೂಜಾರ ಮಾತನಾಡಲಿದ್ದಾರೆ. ದಲಿತ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಪ್ರೊ. ಅರ್ಜುನ ಗೋಳಸಂಗಿ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರು, ದಲಿತ ನಾಯಕ ನಾರಾಯಣಸ್ವಾಮಿ, ಜಾಗತಿಕ ಲಿಂಗಾಯತ ಮಹಾಸಭಾ ಮುಖಂಡ ಅಶೋಕ ಬರಗುಂಡಿ, ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಮುತ್ತನಗೌಡ ಚೌಡರೆಡ್ಡಿ, ನಿವೃತ್ತ ಶಿಕ್ಷಕ ಹಾಗೂ ಟೀಚರ್ ಪತ್ರಿಕೆಯ ಉಪಸಂಪಾದಕ ಎಫ್.ಸಿ. ಚೇಗರೆಡ್ಡಿ, ಜಮಾತೆ ಇಸ್ಲಾಂ ಹಿಂದ್ ಅಧ್ಯಕ್ಷ ಕೆ.ಐ. ಶೇಕ್ ಅಲಿ, ಅಂಜುಮಾನ್ ಮಾಜಿ ಅಧ್ಯಕ್ಷ ಮಹಮ್ಮದ್ ಯೂಸೂಫ್ ಎ. ನಮಾಜಿ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ದಲಿತ ಹೋರಾಟಗಾರ ಮುತ್ತು ಬಿಳಿಯಲಿ, ಪ್ರೊ. ಗುರುನಾಥ ಕೆಂಗಾರಕರ್ ಹಾಗೂ ವಕೀಲ ಬಾಲು ರಾಠೋಡ್ ಅವರು ಓದುಗರಾಗಿ ಅಭಿಪ್ರಾಯ ಹಂಚಿಕೊಳ್ಳಲಿದ್ದಾರೆ. ಈ ವಿಶೇಷಾಂಕ ಬಿಡುಗಡೆ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಶರಣಪ್ಪ ಎಚ್. ಸಂಗನಾಳ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಂಬಳದಲ್ಲಿ ಸೋಲಾರ್-ಗಾಳಿ ಯೋಜನೆಗಳ ದಬ್ಬಾಳಿಕೆ?

## ಸಾವಿರಾರು ಗಿಡಗಳ ಮಾರಣಹೋಮ, ರೈತರ ಭೂಮಿ-ಪರಿಸರ ಸಂಕಷ್ಟದಲ್ಲಿ!



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡಂಬಳ ಹೋಬಳಿಯ ಚುರ್ಚಿಹಾಳ ಹಾಗೂ ಡಂಬಳ ಗ್ರಾಮದ ವ್ಯಾಪ್ತಿಯಲ್ಲಿ ನಿರ್ಮಾಣವಾಗುತ್ತಿರುವ ಹೀರೋ ಸೋಲಾರ್ ವಿದ್ಯುತ್ ಉತ್ಪಾದನಾ ಕಂಪನಿಯ ಕಾಮಗಾರಿಗಳು ಪರಿಸರ ಮತ್ತು ರೈತರ ಜೀವನೋಪಾಯಕ್ಕೆ ಕಂಟಕವಾಗುತ್ತಿವೆ ಎಂಬ ಆರೋಪಗಳು ಕೇಳಿ ಬರುತ್ತಿವೆ.

2024ರಿಂದ 2026ರವರೆಗೆ ನಡೆಯುತ್ತಿರುವ ಈ ಯೋಜನೆಯ ಕಾಮಗಾರಿಗಳ ವೇಳೆ ಸುಮಾರು 800 ಎಕರೆ ಫಲವತ್ತಾದ ಭೂಮಿಯಲ್ಲಿ ಸೋಲಾರ್ ಅಳವಡಿಕೆ ನಡೆಯುತ್ತಿದ್ದು, ಸಾವಿರಾರು ಗಿಡಗಳನ್ನು ಕಡಿದು ಪರಿಸರ ಹಾನಿ ಉಂಟಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಗಿಡಗಳಲ್ಲಿ ಗೂಡು ಕಟ್ಟಿದ್ದ ಪಕ್ಷಿಗಳು, ಸಣ್ಣ ಪ್ರಾಣಿಗಳು ಮತ್ತು ಮೊಟ್ಟೆಗಳು ನಾಶವಾಗಿವೆ ಎಂಬುದಕ್ಕೂ ಆಕ್ರೋಶ ವ್ಯಕ್ತವಾಗಿದೆ.

- * ರೈತರು-ಪರಿಸರವಾದಿಗಳ ಆಗ್ರಹ
- * ಕಡಿದ ಗಿಡಗಳ ಬದಲಿಗೆ ತಕ್ಷಣ ಮರ ನೆಡುವ ಕಾರ್ಯ ಆರಂಭಿಸಬೇಕು
- * ರೈತರಿಗೆ ಸೂಕ್ತ ಪರಿಹಾರ ನೀಡಬೇಕು
- * ಅರಣ್ಯ ಇಲಾಖೆ ಮತ್ತು ಜಿಲ್ಲಾಡಳಿತ ತನಿಖೆ ನಡೆಸಬೇಕು
- * ಪ್ರಾಣಿ-ಪಕ್ಷಿಗಳ ರಕ್ಷಣೆಗೆ ಕ್ರಮ ಕೈಗೊಳ್ಳಬೇಕು

"ನಮ್ಮ ಜಮೀನಿನ ಗಿಡಗಳನ್ನು ಅರಣ್ಯ ಇಲಾಖೆಯ ಅನುಮತಿ ಪಡೆದು ಕಡಿದು ಪರಿಹಾರ ನೀಡುತ್ತೇವೆ ಎಂದಿದ್ದರು. ಆದರೆ ಇಂದಿಗೂ ಪರಿಹಾರ ಸಿಕ್ಕಿಲ್ಲ. ಒಂದೇ ಗಿಡವನ್ನೂ ನೆಟ್ಟಿಲ್ಲ. ನ್ಯಾಯಾಲಯ ಮಧ್ಯಪ್ರವೇಶ ಮಾಡಿ ಕ್ರಮ ಕೈಗೊಳ್ಳಬೇಕು."

**– ಈಶ್ವರಪ್ಪ ಕಣವಿ, ಬಸವರಾಜ ಓಲಿ, ಬಸಪ್ಪ ಗದಗಿನ, ಸೋಮಪ್ಪ ಓಲಿ, ಅಬ್ದುಲಸಾಬ ಕಿರೇಸೂರ, ಹನಮಂತಪ್ಪ ಕೊರವರ, ಗ್ರಾಮಸ್ಥರು.**

"ಹೀರೋ ಸೋಲಾರ್ ಕಂಪನಿಯವರು ಗಿಡಗಳನ್ನು ಕಡಿದಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಅರಣ್ಯ ಇಲಾಖೆಯ ನಿಯಮಗಳ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು."

**– ಮಂಜುನಾಥ ಮೇಗಲಮನಿ,** ವಲಯ ಅರಣ್ಯಾಧಿಕಾರಿಗಳು.

**ಗಿಡಗಳ ಕಡಿತ – ಆಮ್ಲಜನಕ ನಷ್ಟದ ಆತಂಕ!:**

ಪ್ರತಿ ಎಕರೆಗೆ ಸರಾಸರಿ 3 ಗಿಡಗಳಂತೆ ಅಂದಾಜಿಸಿದರೆ 2400ಕ್ಕೂ ಹೆಚ್ಚು ಗಿಡಗಳನ್ನು ಕಡಿದಿರುವ ಸಾಧ್ಯತೆ ಇದೆ ಎಂದು ರೈತರು ಹೇಳುತ್ತಿದ್ದಾರೆ. ಇಷ್ಟೊಂದು ಗಿಡಗಳು ವರ್ಷಕ್ಕೆ ಲಕ್ಷಾಂತರ ಕೆ.ಜಿ. ಆಮ್ಲಜನಕ ಉತ್ಪಾದನೆ ಮಾಡುವ ಸಾಮರ್ಥ್ಯ ಹೊಂದಿದ್ದು, ಅವುಗಳ ಕಡಿತದಿಂದ ಪರಿಸರ ಸಮತೋಲನಕ್ಕೆ ಧಕ್ಕೆಯಾಗಿದೆ ಎಂದು ಆತಂಕ ವ್ಯಕ್ತಪಡಿಸಲಾಗಿದೆ. ಇದೇ ವೇಳೆ ವಿದ್ಯುತ್ ಕಂಬಗಳ ಅಳವಡಿಕೆ ಸಂದರ್ಭದಲ್ಲಿ 500ಕ್ಕೂ ಹೆಚ್ಚು ಗಿಡಗಳನ್ನು ಕಡಿದಿರುವುದಾಗಿ ಆರೋಪಿಸಲಾಗಿದೆ. ಪ್ರಾಣಿಗಳ ವಧೆ ಆರೋಪ: ಬೇರೆ ರಾಜ್ಯಗಳಿಂದ ಬಂದ ಕಾರ್ಮಿಕರು ಸ್ಥಳೀಯವಾಗಿ ಕಂಡು ಬರುವ ಜಿಂಕೆ, ಮೊಲ ಸೇರಿದಂತೆ ಪ್ರಾಣಿ-ಪಕ್ಷಿಗಳನ್ನು ಕೊಂದು ತಿನ್ನುತ್ತಿರುವ ಬಗ್ಗೆ ಗ್ರಾಮಸ್ಥರು ಆರೋಪಿಸಿದ್ದಾರೆ. ಇದನ್ನು ವಿರೋಧಿಸಿದ ರೈತರಿಗೆ ಮಧ್ಯವರ್ತಿಗಳು ಬೆದರಿಕೆ ಹಾಕುತ್ತಿರುವುದಾಗಿ ತಿಳಿದು ಬಂದಿದೆ.

**ಕಾನೂನು ಉಲ್ಲಂಘನೆ ಆರೋಪ:** ಅರಣ್ಯ ಇಲಾಖೆಯ ಅನುಮತಿ ಪಡೆಯದೇ ಗಿಡಗಳನ್ನು ಕಡಿದಿರುವುದಾಗಿ ಆರೋಪಿಸಲಾಗಿದೆ. ನಿಯಮಾವಳಿಗಳ ಪ್ರಕಾರ ಕಡಿದ ಗಿಡಗಳ ಬದಲಿಗೆ ಸಮಾನ ಪ್ರಮಾಣದಲ್ಲಿ ಗಿಡಗಳನ್ನು ನೆಟ್ಟು ಬೆಳಸಬೇಕು ಹಾಗೂ ಪರಿಹಾರ ನೀಡಬೇಕು. ಆದರೆ ಇದುವರೆಗೆ ಸೂಕ್ತ ಕ್ರಮ ಕೈಗೊಳ್ಳಲಾಗಿಲ್ಲ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**ಪರಿಹಾರ ನೀಡದ ಆರೋಪ:** ಕಂಪನಿಯವರು ಪ್ರತಿ ಗಿಡಕ್ಕೆ 30,000 ರಿಂದ 45,000 ಪರಿಹಾರ ನೀಡುವುದಾಗಿ ಹೇಳಿದ್ದರೂ, ರೈತರಿಗೆ ಯಾವುದೇ ಪರಿಹಾರ ಸಿಕ್ಕಿಲ್ಲ ಎಂದು ಆರೋಪಿಸಲಾಗಿದೆ.

# ಸಿದ್ದಲಿಂಗ ನಗರ ಸರ್ಕಾರಿ ಶಾಲೆಗೆ 99.13% ದಾಖಲೆ ಫಲಿತಾಂಶ: ಬಾಲಕಿಯರೇ ಮೇಲುಗೈ





**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸಿದ್ದಲಿಂಗ ನಗರ ಸರ್ಕಾರಿ ಪ್ರೌಢಶಾಲೆ 2026ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 99.13ರ ದಾಖಲೆ ಫಲಿತಾಂಶ ಪಡೆದು ಐತಿಹಾಸಿಕ ಸಾಧನೆ ಮಾಡಿದೆ. ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಈ ಶಾಲೆ "ಎ ಗ್ರೇಡ್" ಗುಣಮಟ್ಟದ ಶಿಕ್ಷಣ ಸ್ಥಾನವನ್ನು ಸಹ ಪಡೆದಿದೆ.

ಪರೀಕ್ಷೆಗೆ ಹಾಜರಾದ 115 ವಿದ್ಯಾರ್ಥಿಗಳಲ್ಲಿ 114 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶಾಲೆಯ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಇಷ್ಟು ಉತ್ತಮ ಫಲಿತಾಂಶ ದಾಖಲಾಗಿದೆ. ಫಲಿತಾಂಶದಲ್ಲಿ ಬಾಲಕಿಯರೇ ಮೇಲುಗೈ ಸಾಧಿಸಿದ್ದು, 57 ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಲ್ಲಿ 42 ಮಂದಿ ಬಾಲಕಿಯರು ಇದ್ದಾರೆ. 22 ಮಂದಿ ದ್ವಿತೀಯ ಶ್ರೇಣಿ ಮತ್ತು 39 ಮಂದಿ ತೃತೀಯ ಶ್ರೇಣಿಯಲ್ಲಿ ಪಾಸಾಗಿದ್ದಾರೆ.

ಶಾಲೆಗೆ ಭೂಮಿಕಾ ಪ್ರಕಾಶ್ ಶೇ0ದ್ರೆ 601 ಅಂಕಗಳೊಂದಿಗೆ (96.16%) ಪ್ರಥಮ ಸ್ಥಾನ ಪಡೆದರೆ, ಉಮಾ ಮಹೇಶ್ವರಿ ಬುಕ್ಸಾಗರಮಠ 574 ಅಂಕಗಳೊಂದಿಗೆ (91.84%) ದ್ವಿತೀಯ ಹಾಗೂ ಮೇಹಕ್ ಇಲ್ಲಾಳ 559 ಅಂಕಗಳೊಂದಿಗೆ (89.44%) ತೃತೀಯ ಸ್ಥಾನ ಗಳಿಸಿದ್ದಾರೆ.

ಮೂರು ವರ್ಷಗಳ ಹಿಂದೆ ಬಸವರಾಜ ಹೊರಟ್ಟಿ ದಂಪತಿಗಳು ಶಾಲೆಯನ್ನು ದತ್ತು ಪಡೆದು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿದ ಪರಿಣಾಮ ಹಾಗೂ ಶಿಕ್ಷಕರ ಪರಿಶ್ರಮ, ವಿದ್ಯಾರ್ಥಿಗಳ ದುಡಿಮೆ ಮತ್ತು ಶಿಕ್ಷಣ ಇಲಾಖೆಯ ಸಹಕಾರದಿಂದ ಈ ಸಾಧನೆ ಸಾಧ್ಯವಾಗಿದೆ.

ಈ ಸಾಧನೆಗೆ ವಿದ್ಯಾರ್ಥಿಗಳು, ಶಿಕ್ಷಕ ವೃಂದ ಹಾಗೂ ಸಿಬ್ಬಂದಿಗೆ ಬಸವರಾಜ ಹೊರಟ್ಟಿ ದಂಪತಿಗಳು, ದತ್ತು ಉಸ್ತುವಾರಿ ಡಾ. ಬಸವರಾಜ ಧಾರವಾಡ, ಉಪ ನಿರ್ದೇಶಕ ಆರ್. ಎಸ್. ಬುರುಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟಪ್ಪನವರ್, ನೋಡಲ್ ಅಧಿಕಾರಿ ಶಂಕರ್ ಹಡಗಲಿ, ಎಸ್‌ಡಿಎಂಸಿ ಅಧ್ಯಕ್ಷೆ ನಂದಾ ಕಟವಟಿ ಸೇರಿದಂತೆ ಅನೇಕರು ಅಭಿನಂದನೆ ಸಲ್ಲಿಸಿದ್ದಾರೆ.

# ಬಾಲ್ಯದಲ್ಲೇ ಬಸವಾದಿ ಶರಣರ ವಿಚಾರ ಅಳವಡಿಸಿಕೊಳ್ಳಲು ಕರೆ

▶▶ಮೊದಲನೇ ಪುಟದಿಂದ

(ತೃತೀಯ).

**ಕಾಲೇಜು ವಿಭಾಗ:** ರಂಜಿತಾ ಮೋತಿಗೌಡರ (ಪ್ರಥಮ), ಮಹಾಲಕ್ಷ್ಮೀ ಪಟ್ಟೇದ (ದ್ವಿತೀಯ), ಶೇಖರಗೌಡ ಪಾಟೀಲ (ತೃತೀಯ).

**ವಚನಾಧಾರಿತ ಚಿತ್ರಕಲೆ (ಪ್ರೌಢಶಾಲೆ):** ಮೇಘನಾ ಲಕ್ಕುಂಡಿ (ಪ್ರಥಮ), ಅನ್ವಿತಾ ಬಳ್ಳಾರಿ (ದ್ವಿತೀಯ), ಲಕ್ಷ್ಮೀ ಬಸರಿ (ತೃತೀಯ).

**ಕಾಲೇಜು ವಿಭಾಗ:** ಗಣೇಶ ಬದಿ (ಪ್ರಥಮ), ವೀರೇಶ ವಿರಕ್ತಮಠ (ದ್ವಿತೀಯ), ಪ್ರೇಮಕುಮಾರ (ತೃತೀಯ).

ಈ ಸಂದರ್ಭದಲ್ಲಿ ಎಸ್.ವಿ. ಪವಾಡಿಗೌಡ್ರ, ನಿಂಗು ಸೊಲಗಿ, ಎಸ್.ಯು. ಸಜ್ಜನಶೆಟ್ಟರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನೇತ್ರದಾನದ ಮೂಲಕ ಮಾನವೀಯತೆ ಮೆರೆದ ಕುಟುಂಬ

## ನಿವೃತ್ತ ನೌಕರ ಈಶ್ವರಯ್ಯ ಪೂಜಾರ ನಿಧನ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆದರ್ಶ ನಗರ ನಿವಾಸಿ ನಿವೃತ್ತ ನೌಕರ ಈಶ್ವರಯ್ಯ ವ್ಹಿ. ಪೂಜಾರ ಅವರು ಗುರುವಾರ ನಿಧನರಾದರು. ಅವರ ನಿಧನದ ಬಳಿಕ ಕುಟುಂಬದವರು ಮಾನವೀಯ ಮೌಲ್ಯಗಳನ್ನು ಮೆರೆದಂತೆ ನೇತ್ರಗಳನ್ನು ದಾನ ಮಾಡಿದ್ದಾರೆ.

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮೃತರ ಕುಟುಂಬಕ್ಕೆ ಸಾಂತ್ವನ ತಿಳಿಸಿ ನೇತ್ರದಾನದ ಮಹತ್ವವನ್ನು ವಿವರಿಸಿದ ಹಿನ್ನೆಲೆಯಲ್ಲಿ ಕುಟುಂಬದವರು ಈ ಮಹತ್ವದ ನಿರ್ಧಾರ ಕೈಗೊಂಡರು.

ನಂತರ ಗದಗ ಜಿಮ್ಸ್ ಆಸ್ಪತ್ರೆ ನೇತ್ರ ತಜ್ಞರ ತಂಡ ನೇತ್ರದಾನ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿತು.

ಈ ಸಂದರ್ಭದಲ್ಲಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ರಮೇಶ ಶಿಗ್ಲಿ, ಅಶ್ವಥ್ ಸುಲಾಖೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪೇಠಾಆಲೂರು ಹಾಲಶಿವಯೋಗೀಶ್ವರ ಪ್ರೌಢಶಾಲೆಗೆ ಶೇ.100 ಫಲಿತಾಂಶ





**■ವಿಜಯಸಾಕ್ಷಿ ಸುದ್ದಿ, ಡಂಬಳ**

ಹೋಬಳಿಯ ಪೇಠಾಆಲೂರಿನ ಹಾಲಶಿವಯೋಗೀಶ್ವರ ಪ್ರೌಢಶಾಲೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ಸಾಧಿಸಿ ಗಮನಾರ್ಹ ಸಾಧನೆ ಮಾಡಿದೆ.

ಪರೀಕ್ಷೆಗೆ ಹಾಜರಾದ 50 ವಿದ್ಯಾರ್ಥಿಗಳಲ್ಲಿ 23 ಬಾಲಕರು ಮತ್ತು 27 ಬಾಲಕಿಯರು ಉತ್ತೀರ್ಣರಾಗಿದ್ದಾರೆ. ಇವರಲ್ಲಿ 35 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಪಾಸಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿನಿ ಭುವನೇಶ್ವರಿ ಹೂಗಾರ್ 553 ಅಂಕಗಳು (ಶೇ. 88.48) ಪಡೆದು ಪ್ರಥಮ ಸ್ಥಾನ ಪಡೆದರೆ, ಮೇಘಾ ಸಂಶಿ 541 ಅಂಕಗಳು (ಶೇ. 86.56) ಪಡೆದು ದ್ವಿತೀಯ ಸ್ಥಾನ ಹಾಗೂ ಪೂಜಾ ಮುರಗಿ 538 ಅಂಕಗಳು (ಶೇ. 86.08) ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ.

ಶಾಲೆಗೆ ಶೇ.100 ಫಲಿತಾಂಶ ತಂದುಕೊಟ್ಟ ವಿದ್ಯಾರ್ಥಿಗಳು ಹಾಗೂ ಶಿಕ್ಷಕ ವೃಂದಕ್ಕೆ ತ್ರಿವಿಧ ದಾಸೋಹಿ ಶ್ರೀ ಹಾಲೇಶ್ವರ ಶರಣರು, ಮುಖ್ಯೋಪಾಧ್ಯಾಯರು, ಗ್ರಾಮಸ್ಥರು, ಪಾಲಕರು ಮತ್ತು ಶಿಕ್ಷಣಪ್ರೇಮಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಹಾತಲಗೇರಿ ಸರ್ಕಾರಿ ಪ್ರೌಢಶಾಲೆಗೆ ಶೇ.100 ಫಲಿತಾಂಶ: "ಎ" ಗ್ರೇಡ್ ಸಾಧನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಹಾತಲಗೇರಿ ಸರ್ಕಾರಿ ಪ್ರೌಢಶಾಲೆ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ಸಾಧಿಸಿ ಗಮನಾರ್ಹ ಸಾಧನೆ ಮಾಡಿದೆ.







ಪರೀಕ್ಷೆಗೆ ಹಾಜರಾದ 54 ವಿದ್ಯಾರ್ಥಿಗಳೂ ಉತ್ತೀರ್ಣರಾಗಿದ್ದು, ಶಾಲೆ ಶೇ.75.45 ಗುಣಾತ್ಮಕ ಫಲಿತಾಂಶ ದೊಂದಿಗೆ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಮಂಡಳಿಯಿಂದ "ಎ" ಗ್ರೇಡ್ ಪಡೆದಿದೆ.

ವಿದ್ಯಾರ್ಥಿಗಳ ಸಾಧನೆ ವಿವರ ಹೀಗಿದೆ: 5 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ, 25 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 6 ವಿದ್ಯಾರ್ಥಿಗಳು ದ್ವಿತೀಯ ಹಾಗೂ 18 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ಈ ಸಾಧನೆಗೆ ಮೇಲಾಧಿಕಾರಿಗಳು, ಎಸ್‌ಡಿಎಂಸಿ ಅಧ್ಯಕ್ಷ ಶಿವಾನಂದ ಪೂಜಾರ, ಸದಸ್ಯರು, ಪ್ರಭಾರಿ ಮುಖ್ಯೋಪಾಧ್ಯಾಯರಾದ ಶ್ರೀಮತಿ ಗೀತಾ ಕಟಗಿ ಹಾಗೂ ಶಿಕ್ಷಕ ವೃಂದ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ. ಇದಲ್ಲದೆ, 2026-27ನೇ ಸಾಲಿನ 8ರಿಂದ 10ನೇ ತರಗತಿಗಳ ಪ್ರವೇಶ ಪ್ರಾರಂಭವಾಗಿದ್ದು, ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ದಾಖಲಿಸಿ ಗುಣಮಟ್ಟದ ಶಿಕ್ಷಣ ಪಡೆಯಲು ಅವಕಾಶ ಕಲ್ಪಿಸಬೇಕೆಂದು ಶಾಲಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸಿಇಟಿ-ನೀಟ್ ತರಬೇತಿಗೆ ಸನ್ಮಾರ್ಗ ಪಿಯು ಕಾಲೇಜು-ಆರಾಧನಾ ವುಮೆನ್ಸ್ ಫೌಂಡೇಶನ್ ಒಡಂಬಡಿಕೆ



**■ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳ ಉನ್ನತ ಭವಿಷ್ಯವನ್ನು ಗಮನ ದಲ್ಲಿಟ್ಟುಕೊಂಡು ಸಿಇಟಿ, ನೀಟ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ವಿಶೇಷ ತರಬೇತಿ ನೀಡುವ ಉದ್ದೇಶದಿಂದ ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯವು 'ಆರಾಧನಾ ವುಮೆನ್ಸ್ ಫೌಂಡೇಶನ್' ಸಂಸ್ಥೆಯೊಂದಿಗೆ ಒಡಂಬಡಿಕೆಗೆ ಬಂದಿರುವುದು ಗಮನಾರ್ಹ ಬೆಳವಣಿಗೆಯಾಗಿದೆ.

ಶಿಕ್ಷಣವು ವ್ಯಕ್ತಿತ್ವ ವಿಕಾಸ, ಜ್ಞಾನಾರ್ಜನೆ ಹಾಗೂ ಆರ್ಥಿಕ ಸ್ಥಿರತೆಗೆ ಆಧಾರವಾಗಿದ್ದು, ತಾರ್ಕಿಕ ಚಿಂತನೆ ಬೆಳೆಸುವುದರ ಜೊತೆಗೆ ಸಮಾಜದ ಪ್ರಗತಿಗೂ ದಾರಿಯಾಗುತ್ತದೆ. ಈ ನಿಟ್ಟಿನಲ್ಲಿ 'ಆರಾಧನಾ ವುಮೆನ್ಸ್ ಫೌಂಡೇಶನ್' ಸಂಸ್ಥೆ ಶೈಕ್ಷಣಿಕ ಕ್ಷೇತ್ರದಲ್ಲಿ ತನ್ನದೇ ಆದ ಗುರುತನ್ನು ಮೂಡಿಸಿಕೊಂಡು, ವಿಶೇಷವಾಗಿ ವಿದ್ಯಾರ್ಥಿನಿಯರ ಸಾಮರ್ಥ್ಯ ವೃದ್ಧಿಗೆ ಒತ್ತು ನೀಡುತ್ತಿದೆ.

ಗದುಗಿನ ಶೈಕ್ಷಣಿಕ ವಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಈ ಸಂಸ್ಥೆ, ಅನುಭವೀ ಸಂಪನ್ಮೂಲ ಉಪನ್ಯಾಸಕರ ಮೂಲಕ ಸನ್ಮಾರ್ಗ ಪಿಯು ಕಾಲೇಜಿನ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಜೆಇಇ, ಸಿಇಟಿ ಮತ್ತು ನೀಟ್ ಪರೀಕ್ಷೆಗಳಿಗಾಗಿ ತರಬೇತಿ ನೀಡಲು ಮುಂದಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಮಟ್ಟವನ್ನು ಹೆಚ್ಚಿಸಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ಸಹಾಯ ಮಾಡುವ ಮಹತ್ವದ ಹೆಜ್ಜೆಯಾಗಿದೆ.

ಈ ಒಡಂಬಡಿಕೆಯ ಕುರಿತು ಮಾತನಾಡಿದ ಸೊಸೈಟಿ ಅಧ್ಯಕ್ಷ ಪ್ರೊ. ರಾಜೇಶ್ ಕುಲಕರ್ಣಿ, ಮಹಿಳೆಯರಲ್ಲಿ ಅಪಾರ ಶಕ್ತಿ ಮತ್ತು ಸಾಮರ್ಥ್ಯವಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಅವರು ನೀಡುತ್ತಿರುವ ಕೊಡುಗೆ ಶ್ಲಾಘನೀಯವಾಗಿದೆ ಎಂದು ಅಭಿಪ್ರಾಯಪಟ್ಟರು. 'ಆರಾಧನಾ ವುಮೆನ್ಸ್ ಫೌಂಡೇಶನ್' ಸಂಸ್ಥೆಯ ಶೈಕ್ಷಣಿಕ ಸೇವೆಗಳು ವಿದ್ಯಾರ್ಥಿಗಳ ಜ್ಞಾನ ವಿಸ್ತರಣೆಗೆ ಪೂರಕವಾಗಲಿ ಎಂದು ಆಶಿಸಿದರು.

ಮಹಿಳೆಯ ಶಕ್ತಿ, ಆತ್ಮವಿಶ್ವಾಸ ಹಾಗೂ ಪರಿಶ್ರಮ ಸಮಾಜ ನಿರ್ಮಾಣದಲ್ಲಿ ಮಹತ್ತರ ಪಾತ್ರವಹಿಸುತ್ತವೆ. ಈ ದಿಸೆಯಲ್ಲಿ ಸಂಸ್ಥೆಯ ಕಾರ್ಯಚಟುವಟಿಕೆಗಳು ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣಕ್ಕೆ ಸ್ಫೂರ್ತಿದಾಯಕವಾಗಿವೆ.

# ಗಾಂಜಾ ಸೇವನೆ: ಇಬ್ಬರು ಯುವಕರು ಪೊಲೀಸ್ ವಶಕ್ಕೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಾರ್ವಜನಿಕ ಸ್ಥಳದಲ್ಲಿ ಗಾಂಜಾ ಮಾದಕ ಪದಾರ್ಥ ಸೇವನೆ ಮಾಡುತ್ತಿದ್ದ ಇಬ್ಬರು ಯುವಕರನ್ನು ಪೊಲೀಸರು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ.

ಪಟ್ಟಣದ ದೊಡ್ಡೂರು ರಸ್ತೆಗೆ ಹೊಂದಿಕೊಂಡಿರುವ ಪ್ಲಾಟ್ ಒಂದರಲ್ಲಿ ಸಾರ್ವಜನಿಕ ಸ್ಥಳದಲ್ಲಿ ಇಬ್ಬರು ವ್ಯಕ್ತಿಗಳು ಸೀಗರೇಟಿನಲ್ಲಿ ಗಾಂಜಾ ತುಂಬಿಕೊಂಡು ಸೇವನೆ ಮಾಡುತ್ತಿದ್ದರು. ಈ ವೇಳೆ ಪಿಎಸ್‌ಐ ನಾಗರಾಜ ಗಡದ ಅವರು ದಾಳಿ ನಡೆಸಿ ಇಬ್ಬರನ್ನು ಹಿಡಿದು ಠಾಣೆಗೆ ಕರೆದುಕೊಂಡು ಹೋಗಿ ಸ್ವಯಂ ದೂರು ದಾಖಲಿಸಿಕೊಂಡಿದ್ದಾರೆ.

ಬಂಧಿತರು ಸೋಮೇಶ್ವರ ನಗರದ ಯಲ್ಲಪ್ಪ ತಂದೆ ಫಕ್ಕೀರಪ್ಪ ಹೊಂಬಳ (29) ಹಾಗೂ ಗಡ್ಡಯ್ಯನಗರದ ತುರಾಫಷಾ ತಂದೆ ಮೌಲಾಲಿ ಮುಳಗುಂದ (25) ಎಂದು ತಿಳಿದುಬಂದಿದ್ದು, ಇವರ ವಿರುದ್ಧ ಪ್ರಕರಣ ದಾಖಲಾಗಿದೆ.

# ಹರ್ತಿ ಹುಲಕೋಟಿ ಪ್ರೌಢಶಾಲೆಗೆ ಉತ್ತಮ ಫಲಿತಾಂಶ: ತಾಲೂಕಿಗೆ ದ್ವಿತೀಯ ಸ್ಥಾನ





**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಹರ್ತಿ ಹುಲಕೋಟಿ ಶಿಕ್ಷಣ ಸಮಿತಿಯ ಪ್ರೌಢಶಾಲೆ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ದಾಖಲಿಸಿದೆ. ಶಾಲೆಯ ವಿದ್ಯಾರ್ಥಿನಿ ಸಪ್ನಾ ಪಾಲನಕರ 611 ಅಂಕಗಳನ್ನು (ಶೇ. 97.7) ಪಡೆದು ತಾಲೂಕಿಗೆ ದ್ವಿತೀಯ ಸ್ಥಾನ ಪಡೆಯುವ ಮೂಲಕ ಗಮನಾರ್ಹ ಸಾಧನೆ ಮಾಡಿದ್ದಾಳೆ. ಪಾರ್ವತಿ ಗಾರವಾಡ 588 ಅಂಕಗಳು (ಶೇ. 94) ಪಡೆದು ದ್ವಿತೀಯ ಸ್ಥಾನ ಹಾಗೂ ಸಹನಾ ಕುರ್ತಕೋಟಿ 580 ಅಂಕಗಳು (ಶೇ. 92.8) ಪಡೆದು ತೃತೀಯ ಸ್ಥಾನ ಗಳಿಸಿ ಶಾಲೆಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಪ್ರಧಾನ ಗುರುಮಾತೆ ಗೀತಾ ಸಿಂದಗಿ ಹಾಗೂ ಶಿಕ್ಷಕ ವೃಂದ ಅಭಿನಂದನೆ ವ್ಯಕ್ತಪಡಿಸಿದ್ದಾರೆ.

## ಬಂಡೇರಂಗನಾಥೇಶ್ವರ ದೇವಸ್ಥಾನದಲ್ಲಿ ಗರುಡಗಂಬ ಪ್ರತಿಷ್ಠಾಪನೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿಯ ಇತಿಹಾಸ ಪ್ರಸಿದ್ಧ ಶ್ರೀ ಬಂಡೇರಂಗನಾಥೇಶ್ವರ ದೇವಸ್ಥಾನದಲ್ಲಿ ಗರುಡಗಂಬದ ಪುನರ್ ನಿರ್ಮಾಣ ಕಾರ್ಯದ ಅಂಗವಾಗಿ ಗರುಡಗಂಬ ಪ್ರತಿಷ್ಠಾಪನೆ ಪೂಜಾ ಕಾರ್ಯಕ್ರಮ ಶುಕ್ರವಾರ ಭಕ್ತಿಭಾವದಿಂದ ನೆರವೇರಿತು.

ಬೆಳಿಗ್ಗೆ ವೇದಮಂತ್ರಗಳ ಘೋಷಗಳೊಂದಿಗೆ ಪೂಜಾ ವಿಧಿಗಳು ಆರಂಭಗೊಂಡವು. ಗದ್ದಿಕೆರೆ ಚರಂತೇಶ್ವರ ಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಗರುಡಗಂಬಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ಗರುಡಗಂಬವನ್ನು ಪ್ರತಿಷ್ಠಾಪಿಸುವ ಮುನ್ನ ಸಂಪ್ರದಾಯಬದ್ಧ ವಿಧಿವಿಧಾನಗಳನ್ನು ನೆರವೇರಿಸಲಾಯಿತು.

ಗರುಡಗಂಬದ ಜೀರ್ಣೋದ್ಧಾರ ಕಾರ್ಯದ ಸಂಪೂರ್ಣ ವೆಚ್ಚವನ್ನು ಕೊಪ್ಪಳದ ಭಕ್ತರಾದ ಪೂಜಾರ್ ಅಮಾಜಪ್ಪ ಹಾಗೂ ಅವರ ಸಹೋದರರು ಮತ್ತು ಕುಟುಂಬದವರು ವಹಿಸಿಕೊಂಡಿದ್ದು, ಈ ಸೇವೆಯನ್ನು ಸ್ವಾಮಿಯ ಕೃಪೆಗೆ ಸಮರ್ಪಿಸಿದ್ದಾರೆ.

ಸಮಿತಿಯವರು ಇವರ ಸೇವೆಯನ್ನು ಶ್ಲಾಘಿಸಿ ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ದೇವಸ್ಥಾನದ ಧರ್ಮಕರ್ತರು, ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪೂಜೆಯಲ್ಲಿ ಪಾಲ್ಗೊಂಡರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಏರಿಕೆಗೆ ಬುರಡಿ ಸಂತಸ-ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಕರೆ

# ಶಿಕ್ಷಕರ ಶ್ರಮ-ವಿದ್ಯಾರ್ಥಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ನಿರಂತರ ಅಧ್ಯಯನ ಹಾಗೂ ಶಿಕ್ಷಕರ ಗುಣಾತ್ಮಕ ಬೋಧನೆಯಿಂದ ಈ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮಗೊಂಡಿದೆ ಎಂದು ಡಿಡಿಪಿಐ ಆರ್.ಎಸ್. ಬುರಡಿ ಹೇಳಿದರು.

ಬೆಟಗೇರಿಯ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ತಾರಾಲಯದಲ್ಲಿ ಜಿಲ್ಲಾಡಳಿತ, ಶಾಲಾ ಶಿಕ್ಷಣ ಇಲಾಖೆ ಹಾಗೂ ಗದಗ ಐಎಂಎ ಶತಮಾನೋತ್ಸವದ ಅಂಗವಾಗಿ ಆಯೋಜಿಸಲಾದ ಖಗೋಳ ವಿಸ್ಮಯ ಉಚಿತ ಬೇಸಿಗೆ ಶಿಬಿರದ 10ನೇ ದಿನದ 45ನೇ ಶೋ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಶಿಕ್ಷಕರ ಮನೆ ಭೇಟಿ, ಅಧಿಕಾರಿಗಳ ಮಾರ್ಗದರ್ಶನ, ವಿಶೇಷ ಕಾರ್ಯಾಗಾರಗಳು,



ವಸತಿ ನಿಲಯದ ವಿದ್ಯಾರ್ಥಿಗಳಿಗೆ ಸಂಜೆ ತರಗತಿಗಳು, ಸಂಪನ್ಮೂಲ ಶಿಕ್ಷಕರಿಂದ ಸಂದೇಹ ನಿವಾರಣೆ, ತಾಲೂಕು ಮಟ್ಟದ ತರಬೇತಿಗಳು ಮತ್ತು ಪ್ರೇರಣಾ ಕಾರ್ಯಾಗಾರಗಳ ಫಲವಾಗಿ ಉತ್ತಮ ಸಾಧನೆ ಸಾಧ್ಯವಾಗಿದೆ ಎಂದರು.

ಇನ್ನೋರ್ವ ಮುಖ್ಯ ಅತಿಥಿ ನಿವೃತ್ತ ಡಿಡಿಪಿಐ ಎ.ಎನ್. ನಾಗರಳ್ಳಿ ಮಾತನಾಡಿ, ಸರ್ಕಾರಿ ಶಾಲೆಗಳ ಉನ್ನತೀಕರಣಕ್ಕೆ ಶಿಕ್ಷಕರು, ಪೋಷಕರು ಹಾಗೂ ಸಮುದಾಯ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಹೇಳಿದರು. ನಿವೃತ್ತ ಡಿಡಿಪಿಐ ಐ.ಬಿ. ಬೆನಕೊಪ್ಪ ಮಾತನಾಡಿ, ವಿದ್ಯಾರ್ಥಿಗಳು ಕುತೂಹಲದಿಂದ ಅಧ್ಯಯನ ಮಾಡಿ ಶೋಧನೆ ಹಾಗೂ ಸಂಶೋಧನೆಗೆ ಮುಂದಾಗಬೇಕು.

> "ವಿದ್ಯಾರ್ಥಿಗಳು ಬಿಸಿಲಿನ ತಾಪಮಾನದಿಂದ ರಕ್ಷಣೆ ಪಡೆಯಬೇಕು. ಕುತೂಹಲದ ಮನೋಭಾವದಿಂದ 'ನೋಡಿ ಕಲಿ, ಮಾಡಿ ಕಲಿ' ಎಂಬ ವೈಜ್ಞಾನಿಕ ದೃಷ್ಟಿಕೋನ ಬೆಳೆಸಿಕೊಳ್ಳಬೇಕು."
>
> **– ಆರ್.ಎಸ್. ಬುರಡಿ,** ಡಿಡಿಪಿಐ, ಗದಗ

> "ವಿದ್ಯಾರ್ಥಿಗಳ ಕೈಯಲ್ಲಿ ಪುಸ್ತಕಗಳಿರಬೇಕು, ಮೊಬೈಲ್ ಫೋನ್ ಅಲ್ಲ. ಡಿಜಿಟಲ್ ಉಪವಾಸ ಕೈಗೊಂಡು ಅಧ್ಯಯನಶೀಲರಾಗಬೇಕು."
>
> **– ಐ.ಬಿ. ಬೆನಕೊಪ್ಪ,** ನಿವೃತ್ತ ಡಿಡಿಪಿಐ.

ಪ್ರಶ್ನಿಸುವ ಮನೋಭಾವವೇ ನಿಜವಾದ ಜ್ಞಾನಕ್ಕೆ ದಾರಿ ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ನಿವೃತ್ತ ಉಪನಿರ್ದೇಶಕ ಎಸ್.ಡಿ. ಗಾಂಜಿ ಸೇರಿದಂತೆ ಗಣ್ಯರನ್ನು ಸನ್ಮಾನಿಸಲಾಯಿತು. ಇದೇ ವೇಳೆ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮಗೊಳಿಸಿದಕ್ಕಾಗಿ ಡಿಡಿಪಿಐ ಆರ್.ಎಸ್. ಬುರಡಿ ಅವರನ್ನು ಗೌರವಿಸಲಾಯಿತು.

ಇಲಾಖೆಯ ಸಂಪನ್ಮೂಲ ವ್ಯಕ್ತಿಗಳಾದ ಎಂ.ಎಚ್. ಸವದತ್ತಿ, ಎಂ.ಎ. ಯರಗುಡಿ, ಶಾಮ ಲಾಂಡೆ, ವಿಜಯಕುಮಾರ ಕಪ್ಲಿ, ಬಸವರಾಜ ಕಡಿವಾಲ, ಸಾಗರ ಅಂಗಡಿ, ಸದಾನಂದ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಾಲಕರು ಭಾಗವಹಿಸಿದ್ದರು.

ಸಮಾಜಮುಖಿ ಕಾರ್ಯಗಳಿಂದ ಸರ್ವಾಂಗೀಣ ಅಭಿವೃದ್ಧಿಗೆ ಉತ್ತೇಜನ

## ಸೂರಣಗಿಯಲ್ಲಿ ವೀಲ್‌ಚೇರ್, ವಾಟರ್‌ಬೆಡ್ ವಿತರಣೆ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜಮುಖಿ ಕಾರ್ಯಗಳ ಮೂಲಕ ಜನರ ಬದುಕಿಗೆ ಸಹಾಯಹಸ್ತ ನೀಡುತ್ತಿರುವ ಶ್ರೀ ಕ್ಷೇತ್ರ ಧರ್ಮಸ್ಥಳ ಸಂಸ್ಥೆಯ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ರಿ)ಯ ಕಾರ್ಯಗಳು ನಿರಂತರವಾಗಿ ಸಾಗುತ್ತಿದ್ದು, ಇದರ ಮೂಲ ಉದ್ದೇಶವೇ ಸಮಾಜದ ಸರ್ವಾಂಗೀಣ ಅಭಿವೃದ್ಧಿಯಾಗಿದೆ ಎಂದು ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ ತಿಳಿಸಿದ್ದಾರೆ.

ತಾಲೂಕಿನ ಸೂರಣಗಿ ಗ್ರಾಮದಲ್ಲಿ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ಸೂರಣಗಿ ವಲಯದ ವತಿಯಿಂದ ಆಯೋಜಿಸಲಾದ ಜಲಮಂಗಲ ಕಾರ್ಯಕ್ರಮದಡಿ ಫಲಾನುಭವಿಗಳಿಗೆ ವೀಲ್‌ಚೇರ್ ಹಾಗೂ ವಾಟರ್‌ಬೆಡ್ ವಿತರಿಸಿ ಅವರು ಮಾತನಾಡಿದರು.

ಧರ್ಮಸ್ಥಳ ಸಂಸ್ಥೆಯು ಶಾಲೆಗಳಿಗೆ ಡೆಸ್ಕ್‌ಗಳ ವಿತರಣೆ, ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣ, ಕೆರೆಗಳ ಅಭಿವೃದ್ಧಿ ಸೇರಿದಂತೆ ಹಲವು ಜನೋಪಯೋಗಿ ಕಾರ್ಯಕ್ರಮಗಳನ್ನು ಕೈಗೊಂಡು ಸಮಾಜದ ಪ್ರಗತಿಗೆ ಮಹತ್ವದ ಕೊಡುಗೆ ನೀಡುತ್ತಿದೆ.

ಸ್ವಸಹಾಯ ಸಂಘಗಳ ಮೂಲಕ ಮಹಿಳೆಯರಿಗೆ ಸ್ವಾವಲಂಬನೆಯ ಬದುಕಿಗೆ ಅವಕಾಶ ಕಲ್ಪಿಸಲಾಗುತ್ತಿದೆ. ಜೊತೆಗೆ ಅನಾರೋಗ್ಯ ಪೀಡಿತರಿಗೆ ನೆರವು, ಮದ್ಯವರ್ಜನ ಶಿಬಿರಗಳ ಮೂಲಕ ಕುಟುಂಬಗಳಿಗೆ ನೆಮ್ಮದಿಯ ಜೀವನ ಒದಗಿಸುವ ಕಾರ್ಯವೂ ನಡೆಯುತ್ತಿದೆ ಎಂದು ಹೇಳಿದರು.

ಯುವ ಸಮುದಾಯವನ್ನು ದುಶ್ಚಟಗಳಿಂದ ದೂರವಿಟ್ಟು ಸನ್ಮಾರ್ಗದತ್ತ ಕರೆದೊಯ್ಯುವ ಮೂಲಕ ಸಮಾಜವನ್ನು ಸಾಮಾಜಿಕ, ಆರ್ಥಿಕ ಹಾಗೂ ಕೌಟುಂಬಿಕವಾಗಿ ಸದೃಢಗೊಳಿಸುವ ಕಾರ್ಯ ಧರ್ಮಸ್ಥಳ ಸಂಸ್ಥೆಯಿಂದ ನಿರಂತರವಾಗಿ ನಡೆಯುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.

ಗ್ರಾಮದ ಯುವ ಮುಖಂಡ ರಮೇಶ್ ಹಂಗನಕಟ್ಟಿ ಮಾತನಾಡಿ, ಮಹಿಳಾ ಸಬಲೀಕರಣ ಹಾಗೂ ಸಾಮಾಜಿಕ-ಆರ್ಥಿಕ ಅಭಿವೃದ್ಧಿಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಕೈಗೊಂಡಿರುವ ಯೋಜನೆಗಳು ಪ್ರಶಂಸನೀಯವಾಗಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿರಹಟ್ಟಿ-ಲಕ್ಷ್ಮೇಶ್ವರ ಯೋಜನಾಧಿಕಾರಿ ಪುನೀತ ಓಲೇಕಾರ, ಕೃಷಿ ಮೇಲ್ವಿಚಾರಕರು, ವಲಯ ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು, ಫಲಾನುಭವಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಎಸ್‌ಎಸ್‌ಎಲ್‌ಸಿಯಲ್ಲಿ 99.36% ಅಂಕಗಳೊಂದಿಗೆ ಜಿಲ್ಲೆಯ ದ್ವಿತೀಯ ಸ್ಥಾನ

## ಸಾಧನೆಯ ಶಿಖರಕ್ಕೇರಿದ ಸಹನಾ


■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ 23ನೇ ವಾರ್ಡ್‌ನ ಕುರದಗಡ್ಡಿಯ ಪ್ರತಿಭಾವಂತ ವಿದ್ಯಾರ್ಥಿನಿ ಕುಮಾರಿ ಜಿ. ಸಹನಾ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625 ಅಂಕಗಳಲ್ಲಿ 621 ಅಂಕಗಳನ್ನು (99.36%) ಪಡೆದು ಜಿಲ್ಲೆಯ ದ್ವಿತೀಯ ಸ್ಥಾನ ಹಾಗೂ ಹಗರಿಬೊಮ್ಮನಹಳ್ಳಿ ತಾಲ್ಲೂಕಿನಲ್ಲಿ ಪ್ರಥಮ ಸ್ಥಾನ ಪಡೆದು ಅಪೂರ್ವ ಸಾಧನೆ ಮಾಡಿದ್ದಾರೆ.

ಅವಿರತ ಪರಿಶ್ರಮ ಮತ್ತು ದೃಢ ಸಂಕಲ್ಪದ ಫಲವಾಗಿ ಈ ಸಾಧನೆ ಸಾಧ್ಯವಾಗಿದೆ. ಸಹನಾಳ ಈ ಸಾಧನೆ ವಾರ್ಡ್‌ನ ಜನತೆಗೆ ಹಾಗೂ ಸಮುದಾಯಕ್ಕೆ ಪ್ರೇರಣೆಯಾಗಿದೆ.

ಸಹನಾಳ ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಧನೆಗಳ ಶಿಖರಗಳನ್ನು ಏರಲಿ ಎಂದು ಆಶಿಸಿ, ವಾರ್ಡ್‌ನ ಸಾರ್ವಜನಿಕರ ಪರವಾಗಿ ಪುರಸಭೆಯ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಜೋಗಿ ಹನುಮಂತಪ್ಪ ಅವರು ಆತ್ಮೀಯವಾಗಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ವಾರ್ಡ್‌ನ ಹಿರಿಯರಾದ ತಳವಾರ್ ಸಿದ್ದಪ್ಪ, ಉಪ್ಪಾರ ಸಮಾಜದ ಅಧ್ಯಕ್ಷ ಕನಕಪ್ಪ, ಗುಂಡ್ರು ಹನುಮಂತಪ್ಪ, ಬಾಲಣ್ಣ, ಹ್ಯಾಟಿ ವೀರೇಶ್, ತಳವಾರ ಪರಶುರಾಮ್, ಅಶೋಕ್ ಉಪ್ಪಾರ, ಪ್ರಕಾಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



## ಶಾಲೆಗೆ ಪ್ರಥಮ ಸ್ಥಾನ ಪಡೆದ ಗೀತಾ ತಳವಾರ

■ವಿಜಯಸಾಕ್ಷಿ ಸುದ್ದಿ, ರೋಣ

ಸ' ವಿ ೦ ೀ ಪ' ದ' ಮಾರನಬಸರಿ ಗ್ರಾಮದ ಸರಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿನಿ ಗೀತಾ ತಳವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 88.12 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ ಸ್ಥಾನ ಗಳಿಸಿದ್ದಾಳೆ.



ಮಿನಾಜ್ ಕಳಕಾಪೂರ ಶೇ. 86.56 ಹಾಗೂ ರೇಣುಕಾ ಜಾಲಿಹಾಳ ಶೇ. 84.80 ಅಂಕಗಳನ್ನು ಗಳಿಸಿ ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.


ವಿದ್ಯಾರ್ಥಿನಿಯರ ಈ ಸಾಧನೆಗೆ ಎಸ್‌ಡಿಎಂಸಿ ಸದಸ್ಯರು ಹಾಗೂ ಶಾಲೆಯ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ.

## ಶ್ರೀ ಅನ್ನದಾನೇಶ್ವರ ಸಂಭ್ರಮದ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವೈಶಾಖ ಮಾಸದ ಶುಕ್ಲ ಪಕ್ಷದ ನವಮಿಯ ಶುಭ ಸಂದರ್ಭದಲ್ಲಿ ಸಮೀಪದ ಅಬ್ಬಿಗೇರಿ ಗ್ರಾಮದ ಹಾಲಕೆರೆ ಶ್ರೀ ಅನ್ನದಾನೇಶ್ವರ ಶಾಖಾ ಮಠದಲ್ಲಿ ಶನಿವಾರ ಶ್ರೀ ಅನ್ನದಾನೇಶ್ವರ ಜಾತ್ರಾ ಮಹೋತ್ಸವವು ಭಕ್ತಿ ವೈಭವದಿಂದ ನೆರವೇರಿತು. ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆದ ಈ ಉತ್ಸವವು ಗ್ರಾಮದಲ್ಲಿ ಹಬ್ಬದ ಸಂಭ್ರಮವನ್ನು ಸೃಷ್ಟಿಸಿತು.

ಬೆಳಿಗ್ಗೆಯಿಂದಲೇ ಮಠದ ಆವರಣದಲ್ಲಿ ಮಂಗಳ ವಾದ್ಯಗಳೊಂದಿಗೆ ಧಾರ್ಮಿಕ ಕಾರ್ಯಕ್ರಮಗಳು ಆರಂಭಗೊಂಡವು. ಶ್ರೀ ಅನ್ನದಾನೇಶ್ವರ ಸ್ವಾಮಿಗಳಿಗೆ ವಿಶೇಷ ಅಭಿಷೇಕ, ಪಂಚಾಮೃತ ಸ್ನಾನ ಹಾಗೂ ಮಹಾಪೂಜೆಗಳನ್ನು ಭ'ಕ್ತಿ ಪ್'ೂ ವ'ರ್ ಕ' ವಾ ಗಿ ನೆರವೇರಿಸಲಾಯಿತು. ಉತ್ಸವ ಮೂರ್ತಿಯನ್ನು ವಿವಿಧ ಪುಷ್ಪಗಳಿಂದ ಆಕರ್ಷಕವಾಗಿ ಅಲಂಕರಿಸಲಾಗಿತ್ತು.



ಸಂಜೆ ನಡೆದ ಭವ್ಯ ರಥೋತ್ಸವವು ಜಾತ್ರೆಯ ಪ್ರಮುಖ ಆಕರ್ಷಣೆಯಾಗಿತ್ತು. ಭಕ್ತರ ಜಯಘೋಷಗಳ ನಡುವೆ ಸ್ವಾಮಿಯ ಉತ್ಸವ ಮೂರ್ತಿಯನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಮೆರವಣಿಗೆಯುದ್ದಕ್ಕೂ ಭಜನೆ, ಕುಣಿತ ಹಾಗೂ ಜಾನಪದ ಕಲಾತಂಡಗಳ ಪ್ರದರ್ಶನಗಳು ನೆರೆದಿದ್ದವರ ಗಮನ ಸೆಳೆದವು.

ಜಾತ್ರೆಯ ಅಂಗವಾಗಿ ಧಾರ್ಮಿಕ ವಿಧಿವಿಧಾನಗಳ ಜೊತೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಕೂಡ ನಡೆಯಿತು. ಹಿರಿಯ ವಿದ್ವಾಂಸರಿಂದ ನಡೆದ ಪ್ರವಚನಗಳು ಭಕ್ತರಲ್ಲಿ ಆಧ್ಯಾತ್ಮಿಕ ಜಾಗೃತಿ ಮೂಡಿಸಿದವು. ಸ್ಥಳೀಯ ಕಲಾತಂಡಗಳ ಪ್ರದರ್ಶನಗಳು ಕಾರ್ಯಕ್ರಮಕ್ಕೆ ವಿಶೇಷ ಮೆರಗು ತಂದವು.

ಜಾತ್ರೆಗೆ ಆಗಮಿಸಿದ ಭಕ್ತರಿಗೆ ಮಠದ ವತಿಯಿಂದ ಮಹಾಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.

"ಈ ಜಾತ್ರೆ ಕೇವಲ ಧಾರ್ಮಿಕ ಆಚರಣೆ ಮಾತ್ರವಲ್ಲ, ನಮ್ಮ ಭಾಗದ ಸಾಮಾಜಿಕ ಒಗ್ಗಟ್ಟು ಮತ್ತು ಸಾಂಸ್ಕೃತಿಕ ಪರಂಪರೆಯ ಸಂಕೇತವಾಗಿದೆ" ಎಂದು ಗ್ರಾಮದ ಹಿರಿಯರು ಅಭಿಪ್ರಾಯಪಟ್ಟರು.

ಸುತ್ತಮುತ್ತಲಿನ ಹಳ್ಳಿಗಳಿಂದ ಆಗಮಿಸಿದ ಭಕ್ತರು ಈ ಮಹೋತ್ಸವದಲ್ಲಿ ಭಾಗವಹಿಸಿ ಶ್ರೀಗಳ ಕೃಪೆಗೆ ಪಾತ್ರರಾದರು. ಒಟ್ಟಾರೆ, ಅಬ್ಬಿಗೇರಿಯ ಶ್ರೀ ಅನ್ನದಾನೇಶ್ವರ ಜಾತ್ರಾ ಮಹೋತ್ಸವವು ಭಕ್ತಿ ಮತ್ತು ಶ್ರದ್ಧೆಯ ಮಹಾಸಂಗಮವಾಗಿ ಯಶಸ್ವಿಯಾಗಿ ಸಂಪನ್ನವಾಯಿತು.

ಧರ್ಮ-ಆಧ್ಯಾತ್ಮದ ಸಂದೇಶ ಸಾರಿದ ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು

## ಗಧಾದಾರಿ ವೀರನಾರಾಯಣ ಚಿಂತನೆ ಸದಾಕಾಲ ಜರುಗಲಿ




■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಗಧಾದಾರಿ ಶ್ರೀ ವೀರನಾರಾಯಣನ ಚಿಂತನೆ ಸದಾಕಾಲ ಜರುಗಬೇಕು ಎಂದು ಅದಮಾರು ಮಠದ ಹಿರಿಯ ಶ್ರೀಗಳಾದ ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು ಹೇಳಿದರು.

ನಗರದ ಐತಿಹಾಸಿಕ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಧರ್ಮ ಹಾಗೂ ಆಧ್ಯಾತ್ಮದ ಮೇಲೆ ಉಂಟಾಗುವ ಮಾನಸಿಕ ಉಪಟಳ ನಿವಾರಣೆಗೆ ಬದರಿನಾರಾಯಣನೇ ಗಧಾದಾರಿಯಾಗಿ ಗದುಗಿನಲ್ಲಿ ಅವತರಿಸಿದ್ದಾನೆ ಎಂದು ತಿಳಿಸಿದರು.

ವೀರನಾರಾಯಣನ ಕೈಯಲ್ಲಿರುವ ಗಧೆ ವಾಯುದೇವನ ಸನ್ನಿಧಾನವಾಗಿದ್ದು, ಅದು ದುಷ್ಟರ ನಿಗ್ರಹದ ಸಂಕೇತವಾಗಿದೆ. ಮತ್ತೊಂದು ಕೈಯಲ್ಲಿರುವ ಶಂಖ ಸಾತ್ವಿಕ ಜ್ಞಾನ ಮತ್ತು ಸದುಪದೇಶದ ಪ್ರತೀಕವಾಗಿದೆ ಎಂದು ವಿವರಿಸಿದರು.

ಚತುರ್ಭುಜನ ಚಿಂತನೆಯಿಂದ ಸಕಲ ಇಷ್ಟಾರ್ಥಗಳು ಈಡೇರುವುದಾಗಿ ತಿಳಿಸಿದ ಅವರು, ಭಗವಂತನ ಮೇಲೆ ಅವಹೇಳನ ಮತ್ತು ಅಪಪ್ರಚಾರಗಳನ್ನು ತಡೆಯಲು ವೀರನಾರಾಯಣ ಅವತರಿಸಿದ್ದಾನೆ ಎಂಬ ಹಿನ್ನಲೆಯನ್ನು ವಿವರಿಸಿದರು.

ಈ ಕಾರ್ಯಕ್ರಮವನ್ನು ಶ್ರೀ ವೀರನಾರಾಯಣ, ಶ್ರೀ ತ್ರಿಕೂಟೇಶ್ವರ ದೇವಸ್ಥಾನ ಟ್ರಸ್ಟ್ ಸಮಿತಿ, ಶ್ರೀ ಪವಮಾನ ಸೇವಾ ಸಮಿತಿ, ಶ್ರೀಗುರು ರಾಘವೇಂದ್ರ ಉತ್ಸವ ಮಂಡಳಿ, ಶ್ರೀ ಮಹಾಲಕ್ಷ್ಮೀ ಯುವತಿ ಮಂಡಳ, ಶ್ರೀ ಲಕ್ಷ್ಮೀನಾರಾಯಣ ಮಹಿಳಾ ಮಂಡಳ, ಶ್ರೀ ವೀರನಾರಾಯಣ ಯುವಕ ಮಂಡಳ ಹಾಗೂ ಶ್ರೀ ಲಕ್ಷ್ಮೀನಾರಾಯಣ ಭಜನಾ ಮಂಡಳ ಸಹಯೋಗದಲ್ಲಿ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಪಂ. ವರದಾಚಾರ್ಯ ಜಾಲಿಹಾಳ, ರಾಘಣ್ಣ ಜೋಶಿ, ಶ್ರೀಧರಾಚಾರ್ಯ ಶಿರಹಟ್ಟಿ, ಶ್ರೀಕಾಂತಾಚಾರ್ಯ ನಿಲೂಗಲ್ಲ, ಪ್ರಲ್ಹಾದಾಚಾರ್ಯ ನಿಲೂಗಲ್ಲ, ವೆಂಕಟೇಶ ಕುಲಕರ್ಣಿ, ನಾರಾಯಣಾಚಾರ್ಯ ಗುಡಿ, ಪ್ರದ್ಯುಮ್ನ ಗುಡಿ ಸೇರಿದಂತೆ ಅನೇಕ ಭಕ್ತರು ಭಾಗವಹಿಸಿದ್ದರು.

## ಎಸ್‌ಡಿಎಂ ಇಂಜಿನಿಯರಿಂಗ್ ಕಾಲೇಜಿಗೆ ವಿಭಾಗ ಮಟ್ಟದ ವಾಲಿಬಾಲ್ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಶುಕ್ರವಾರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ (ಗಿಖಿಗ) ಬೆಳಗಾವಿ ವಿಭಾಗ ಮಟ್ಟದ ಮಹಿಳಾ ವಾಲಿಬಾಲ್ ಪಂದ್ಯಾವಳಿ ಯಶಸ್ವಿಯಾಗಿ ನಡೆಯಿತು.

ಸಂಜೆ ನಡೆದ ಅಂತಿಮ ಪಂದ್ಯದಲ್ಲಿ ಧಾರವಾಡದ ಎಸ್‌ಡಿಎಂ ಇಂಜಿನಿಯರಿಂಗ್ ಕಾಲೇಜು ತಂಡವು ಆತಿಥೇಯ ಅಗಡಿ ಇಂಜಿನಿಯರಿಂಗ್ ಕಾಲೇಜು ತಂಡವನ್ನು ತೀವ್ರ ಪೈಪೋಟಿಯ ಪಂದ್ಯದಲ್ಲಿ ಪರಾಭವಗೊಳಿಸಿ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿತು.

ಪಂದ್ಯಾವಳಿ ಉದ್ಘಾಟಿಸಿ ಮಾತನಾಡಿದ ವಿಟಿಯು ಬೆಳಗಾವಿ ವಿಭಾಗದ ಕ್ರೀಡಾ ನಿರ್ದೇಶಕ ಮಂಜುನಾಥ, ಕ್ರೀಡೆಯು ದೈಹಿಕ ಆರೋಗ್ಯ ವೃದ್ಧಿಗೆ ಮಾತ್ರವಲ್ಲದೆ ವಿದ್ಯಾರ್ಥಿಗಳಲ್ಲಿ ಶಿಸ್ತು, ತಂಡಭಾವನೆ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುತ್ತದೆ. ವಿದ್ಯಾರ್ಥಿ ಜೀವನದಲ್ಲಿ ಕ್ರೀಡೆಯಲ್ಲಿ ಭಾಗವಹಿಸುವುದು ಪ್ರತಿಭೆ ಅನಾವರಣಕ್ಕೆ ಸಹಕಾರಿಯಾಗುತ್ತದೆ ಎಂದು ಹೇಳಿದರು.

ಅಂತಿಮ ಪಂದ್ಯದಲ್ಲಿ ಉಭಯ ತಂಡಗಳ ನಡುವೆ ತೀವ್ರ ಹಣಾಹಣಿ ನಡೆಯಿತು. ಕೊನೆಗೆ ಎಸ್‌ಡಿಎಂ ಇಂಜಿನಿಯರಿಂಗ್ ಕಾಲೇಜು ತಂಡ ಜಯದ ನಗೆ ಬೀರಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿತು. ವಿಜೇತ ತಂಡಕ್ಕೆ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಅವರು ಪ್ರಶಸ್ತಿ ವಿತರಿಸಿದರು. ಈ ಸಂದರ್ಭದಲ್ಲಿ ಪ್ರೊ. ವಿಕ್ರಂ ಶಿರೋಳ, ಡಾ. ಸುಭಾಸ್ ಮೇಟಿ, ಡಾ. ಆರ್. ಎಂ. ಪಾಟೀಲ, ಪ್ರೊ. ಸೋಮಶೇಖರ್ ಕೊಡ್ಲಿ, ಮಹಾಂತೇಶ್ ಉಕ್ಲಿ, ರಾಜು ನಾಯಕ, ಎಂ. ಎಚ್. ಅಂಗಡಿ, ಎಂ. ಐ. ಕಣಿಕೆ, ಡಾ. ಸಂತೋಷ ಬುಜರಿ, ಸೋಮಶೇಖರ ಕೆರಿಮನಿ, ಡಾ. ಗಿರೀಶ್ ಯತ್ನಳ್ಳಿ, ರಮೇಶ್ ಕೊಪ್ಪದ, ಷಣ್ಮುಖ ಜಿ., ರವಿ ಸದ್ಲಾಪುರ, ಎಸ್. ಎನ್. ಗೊಂದಕರ, ಕಿರಣ್ ರೆಡ್ಡಿ, ಲಕ್ಷ್ಮಣ ಪಾಟೀಲ, ಗೀತಾ ಬ್ಯಾಟಿ, ಹೀನ ಕೌಸರ್ ಸೇರಿದಂತೆ ಮಹಾವಿದ್ಯಾಲಯದ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka